ಸಂಪುಟ: 11 ಸಂಚಿಕೆ: 145 ಪುಟ: 4+2 ಬೆಲೆ : 3.00 ಶನಿವಾರ ಜುಲೈ 11, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶೆರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 145 Pages : 4+2 Rate : 3.00 Saturday July 11, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹಿಸಿ ಬಿಜೆಪಿ ರೈತ ಮೋರ್ಚಾ ಮನವಿ

# ರೈತರ ಸಂಕಷ್ಟಕ್ಕೆ ತುರ್ತು ಸ್ಪಂದಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಗದಗ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಿ ವಿಶೇಷ ಪರಿಹಾರ ಪ್ಯಾಕೇಜ್ ಪ್ರಕಟಿಸಬೇಕು ಎಂದು ಆಗ್ರಹಿಸಿ ಬಿಜೆಪಿ ರೈತ ಮೋರ್ಚಾ ಜಿಲ್ಲಾ ಘಟಕವು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿತು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಡಿ.ವೈ. ಹುನಗುಂದ, ಹವಾಮಾನ ವೈಪರೀತ್ಯ, ಅಸಮರ್ಪಕ ಮಳೆ, ಬೆಳೆ ವೈಫಲ್ಯ, ದುಬಾರಿ ಬೀಜ-ರಸಗೊಬ್ಬರ ಹಾಗೂ ಮಾರುಕಟ್ಟೆ ದರ ಕುಸಿತದಿಂದ ರೈತರು ಆರ್ಥಿಕವಾಗಿ ಕಂಗಾಲಾಗಿದ್ದಾರೆ. ಬೆಳೆ ಬೆಳೆಯಲು ಮಾಡಿದ ಹೂಡಿಕೆಯನ್ನೇ ಮರಳಿ ಪಡೆಯಲಾಗದ ಸ್ಥಿತಿ ನಿರ್ಮಾಣವಾಗಿದ್ದು, ಸರ್ಕಾರ ಕೂಡಲೇ ಬರ ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಒತ್ತಾಯಿಸಿದರು.

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಹಾಗೂ ರಾಜ್ಯ ಪರಿಹಾರ ನಿಧಿಯಡಿ ಬಾಕಿ ಉಳಿದಿರುವ ಬೆಳೆ ವಿಮೆ ಮತ್ತು ಬೆಳೆ ಹಾನಿ ಪರಿಹಾರವನ್ನು ಎರಡು ವಾರಗಳೊಳಗೆ ರೈತರ ಖಾತೆಗೆ ಜಮೆ ಮಾಡಬೇಕು ಎಂದು ಆಗ್ರಹಿಸಿದ ಅವರು, ಎಲ್ಲ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಜಾರಿಗೊಳಿಸಿ.



ಖಾಸಗಿ ಮಧ್ಯವರ್ತಿಗಳ ಶೋಷಣೆ ತಪ್ಪಿಸಲು ಜಿಲ್ಲೆಯಲ್ಲಿ ಅಗತ್ಯ ಸಂಖ್ಯೆಯ ಸರ್ಕಾರಿ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಅಘೋಷಿತ ವಿದ್ಯುತ್ ಕಡಿತ ಮತ್ತು ವೋಲ್ಟೇಜ್ ಏರಿಳಿತದಿಂದ ಪಂಪ್‌ಸೆಟ್‌ಗಳು ಹಾಳಾಗುತ್ತಿವೆ. ರೈತರಿಗೆ ಹಗಲು ವೇಳೆಯಲ್ಲೇ ಏಳು ಗಂಟೆಗಳ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಪೂರೈಸಬೇಕು. ಹಿಂಗಾರು ಹಂಗಾಮಿಗೆ ಮುನ್ನವೇ ಸಬ್ಸಿಡಿ ದರದಲ್ಲಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರ ವಿತರಿಸಬೇಕು. ನಕಲಿ ಕೃಷಿ ಪರಿಕರ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಜರುಗಿಸಿ ಪರವಾನಗಿ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ಸರಣಿ ಬೆಳೆ ವೈಫಲ್ಯದಿಂದ ಕಂಗಾಲಾಗಿರುವ ರೈತರಿಗೆ ಬ್ಯಾಂಕುಗಳು ನೀಡುತ್ತಿರುವ ಸಾಲ ವಸೂಲಾತಿ ಕಿರುಕುಳವನ್ನು ತಕ್ಷಣ ನಿಲ್ಲಿಸಬೇಕು. ಕೃಷಿ ಸಾಲಮನ್ನಾ ಪ್ರಕ್ರಿಯೆಗೆ ಚಾಲನೆ ನೀಡುವುದರ ಜೊತೆಗೆ ಗ್ರಾಮೀಣ ಪ್ರದೇಶಗಳಲ್ಲಿ ಬರ ಕಾಮಗಾರಿಗಳನ್ನು ಆರಂಭಿಸಿ ಗುಳೆ ತಪ್ಪಿಸಬೇಕು ಎಂದು ಆಗ್ರಹಿಸಿದರು.

ಬೇಡಿಕೆಗಳನ್ನು ಜಿಲ್ಲಾಡಳಿತ ತಕ್ಷಣವೇ ರಾಜ್ಯ ಸರ್ಕಾರದ ಗಮನಕ್ಕೆ ತಂದು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಜಿಲ್ಲೆಯ ಪ್ರಮುಖ ಹೆದ್ದಾರಿಗಳನ್ನು ತಡೆದು ಸರ್ಕಾರಿ ಕಚೇರಿಗಳ ಎದುರು ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಬಿಜೆಪಿ ರೈತ ಮೋರ್ಚಾ ಎಚ್ಚರಿಕೆ ನೀಡಿತು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ ಶಿರಹಟ್ಟಿ, ಅಶೋಕ್ ಬ್ಯಾಹಟ್ಟಿ, ಎಂ.ಎಸ್. ಕರಿಗೌಡ್ರ, ಚನ್ನವೀರಪ್ಪ ಹೂಗಾರ, ಫಕ್ಕೀರೇಶ ರಟ್ಟಿಹಳ್ಳಿ, ವೈ.ಪಿ. ಅಡ್ನೂರ, ಸಂತೋಷ ಅಕ್ಕಿ, ಭೀಮಸಿಂಗ್ ರಾಠೋಡ್, ದೇವರಾಜ ಮೇಟಿ, ಶಂಕರ ಕರಿಬಿಷ್ಟಿ, ರವಿ ವಗ್ಗನವರ, ಸುರೇಶ್ ಮರಳಪ್ಪನವರ, ಬುಡಪ್ಪ ಹಳ್ಳಿ, ಲಕ್ಷ್ಮಣ ರಣತೂರು, ಬಸವರಾಜ ಕುರ್ತಕೋಟಿ, ರಮೇಶ್ ಸಜ್ಜಗಾರ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

> **ಮಳೆ ಇಲ್ಲ... ಬೆಳೆ ಇಲ್ಲ... ಪರಿಹಾರವೂ ಇಲ್ಲ. ರೈತರ ಬದುಕು ಉಳಿಸಬೇಕಾದರೆ ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ ಸರ್ಕಾರ ನೆರವಿಗೆ ಬರಬೇಕು.**
> **- ಡಿ.ವೈ. ಹುನಗುಂದ,**
> ಜಿಲ್ಲಾಧ್ಯಕ್ಷ, ಬಿಜೆಪಿ ರೈತ ಮೋರ್ಚಾ

# ಭಾನುವಾರ ಉಪ ನೋಂದಣಿ ಕಚೇರಿಗಳಿಗೆ ರಜೆ ಇಲ್ಲ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಾರ್ವಜನಿಕರ ಅನುಕೂಲ ಹಾಗೂ ಇಲಾಖೆಯ ಕಾರ್ಯದೊತ್ತಡ ಕಡಿಮೆ ಮಾಡುವ ಉದ್ದೇಶದಿಂದ ಜುಲೈ 12ರ ಭಾನುವಾರ ರಾಜ್ಯದ ಎಲ್ಲಾ ಉಪ ನೋಂದಣಿ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ ಎಂದು ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ತಿಳಿಸಿದೆ.

ಸಾರ್ವಜನಿಕ ರಜಾ ದಿನವಾಗಿದ್ದರೂ ರಾಜ್ಯದ ಎಲ್ಲ ಉಪ ನೋಂದಣಿ ಕಚೇರಿಗಳು ಪೂರ್ಣ ಪ್ರಮಾಣದಲ್ಲಿ ತೆರೆದಿರಲಿದ್ದು, ಆಸ್ತಿ ನೋಂದಣಿ, ಮುದ್ರಾಂಕ ಖರೀದಿ ಸೇರಿದಂತೆ ಇಲಾಖೆಗೆ ಸಂಬಂಧಿಸಿದ ಎಲ್ಲ ಸೇವೆಗಳು ಲಭ್ಯವಿರಲಿವೆ.

ಸಾರ್ವಜನಿಕರು ಈ ವಿಶೇಷ ಅವಕಾಶದ ಸದುಪಯೋಗ ಪಡೆದುಕೊಳ್ಳುವಂತೆ ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ಪ್ರಕಟಣೆಯಲ್ಲಿ ಮನವಿ ಮಾಡಿದೆ.

# ಇಂದು ಕಸಾಪದಲ್ಲಿ ಗಮಕ ವಾಚನ ವ್ಯಾಖ್ಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕರ್ನಾಟಕ ಗಮಕ ಕಲಾ ಪರಿಷತ್ತು, ಕುಮಾರವ್ಯಾಸ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಜುಲೈ 11ರಂದು ಸಂಜೆ 6.30ಕ್ಕೆ ನಗರದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಗಮಕ ವಾಚನ ಮತ್ತು ವ್ಯಾಖ್ಯಾನ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಕುವೆಂಪು ವಿರಚಿತ ಶ್ರೀರಾಮಾಯಣ ದರ್ಶನಂಟಿ ಮಹಾಕಾವ್ಯದ ಊರ್ಮಿಳೆಟಿ ಪ್ರಸಂಗದ ಕುರಿತು ಹೆಸರಾಂತ ಗಮಕಿ ಡಾ. ವಿಶ್ವನಾಥ ಶ್ರೀನಿವಾಸ ಕುಲಕರ್ಣಿ ಗಮಕ ವಾಚನ ಮತ್ತು ವ್ಯಾಖ್ಯಾನ ನಡೆಸಿಕೊಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನಿವೃತ್ತ ಅಂಚೆ ಅಧಿಕಾರಿ ಎಸ್.ಎಲ್. ಕುಲಕರ್ಣಿ ಹಾಗೂ ಗದಗ ಜಿಲ್ಲಾ ಗಮಕ ಕಲಾ ಪರಿಷತ್ತಿನ ಅಧ್ಯಕ್ಷ ಡಾ. ದತ್ತಪ್ರಸನ್ನ ಪಾಟೀಲ ಭಾಗವಹಿಸಲಿದ್ದಾರೆ. ಸಾಹಿತ್ಯಾಸಕ್ತರು, ಗಮಕಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

# ಎಸ್‌ಐಆರ್: 8.90 ಲಕ್ಷ ಎನ್ಯುಮರೇಷನ್ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್2026) ಪ್ರಕ್ರಿಯೆ ಗದಗ ಜಿಲ್ಲೆಯಲ್ಲಿ ಚುರುಕುಗೊಂಡಿದ್ದು, ಜುಲೈ 9ರ ವೇಳೆಗೆ 8,90,698 ಎನ್ಯುಮರೇಷನ್ ಫಾರ್ಮಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ-ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ ವಿತರಿಸುವ ಕಾರ್ಯವನ್ನು ಮುಂದುವರಿಸಿದ್ದಾರೆ.




### ಚಿತ್ರದುರ್ಗದಲ್ಲಿ ಭೋವಿ ಶಕ್ತಿ ಪ್ರದರ್ಶನಕ್ಕೆ ವೇದಿಕೆ ಸಜ್ಜು-10 ಸಾವಿರಕ್ಕೂ ಅಧಿಕ ಜನರು ಸೇರುವ ನಿರೀಕ್ಷೆ

# ಜು.19ರಂದು ರಾಷ್ಟ್ರೀಯ ಭೋವಿ ಜನೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ಜುಲೈ 19ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ರಾಷ್ಟ್ರೀಯ ಭೋವಿ ಜನೋತ್ಸವ ಭೋವಿ ಸಮಾಜದ ಐಕ್ಯತೆ, ಹಕ್ಕುಗಳು ಮತ್ತು ಭವಿಷ್ಯದ ಬೇಡಿಕೆಗಳನ್ನು ಪ್ರತಿಧ್ವನಿಸುವ ಮಹತ್ವದ ವೇದಿಕೆಯಾಗಲಿದೆ ಎಂದು ಭೋವಿ ಸಮಾಜದ ರಾಜ್ಯ ಕಾರ್ಯಾಧ್ಯಕ್ಷ ರವಿ ಪೂಜಾರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದ ಗುರುಗಳ ಜನ್ಮೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸಮಾಜದ ಬಾಂಧವರು, ಜನಪ್ರತಿನಿಧಿಗಳು ಹಾಗೂ ಮುಖಂಡರು ಭಾಗವಹಿಸಲಿದ್ದು, ವಧುವರರ ಸಮಾವೇಶ ಮತ್ತು ಬೃಹತ್ ರಕ್ತದಾನ ಶಿಬಿರ ಕೂಡ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಉದ್ಘಾಟಿಸಲಿದ್ದು, ವಿವಿಧ ರಾಜ್ಯಗಳ ಭೋವಿ ಸಮಾಜದ ಮುಖಂಡರು ಹಾಗೂ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಭೋವಿ ಸಮಾಜವನ್ನು ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಮತ್ತಷ್ಟು ಸದೃಢಗೊಳಿಸುವ ಉದ್ದೇಶದಿಂದ ಜನೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ರವಿ ಗುಂಜಿಕರ್ ತಿಳಿಸಿದರು.

ಕರ್ನಾಟಕ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಮಾತನಾಡಿ, ಜಿಲ್ಲೆಯ ಪ್ರತಿಯೊಂದು ಹಳ್ಳಿಯಿಂದ ಚಿತ್ರದುರ್ಗಕ್ಕೆ ತೆರಳಲು ವಾಹನಗಳ ವ್ಯವಸ್ಥೆ ಮಾಡಲಾಗಿದ್ದು, 10 ಸಾವಿರಕ್ಕೂ ಅಧಿಕ ಜನರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಯಕ್ಕ ಕಳ್ಳಿ, ರಾಘವೇಂದ್ರ ಧಾರವಾಡ, ಆಂಜನೇಯ ಕಟಗಿ, ಹುಚ್ಚಪ್ಪ ಸಂದಕದ, ಸೋಮು ಗುಡಿ, ಪರಶುರಾಮ ಕರಡಿಕೊಳ್ಳ, ಪವನ್ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ಸೇವಾ ಭದ್ರತೆಗೆ ಸಿಎಂಗೆ ಮನವಿ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸಿ, ಬಹುಕಾಲದಿಂದ ಬಾಕಿ ಇರುವ ಬೇಡಿಕೆಗಳನ್ನು ಶೀಘ್ರವೇ ಈಡೇರಿಸುವಂತೆ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್. ಕಲ್ಮನಿ ನೇತೃತ್ವದ ನಿಯೋಗವು ಬೆಳಗಾವಿಯ ಸುವರ್ಣ ಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿತು.

ನಿಯೋಗವು ಅತಿಥಿ ಉಪನ್ಯಾಸಕರ ಪ್ರಸ್ತುತ ಸಮಸ್ಯೆಗಳು, ಸೇವಾ ಭದ್ರತೆ ಹಾಗೂ ಭವಿಷ್ಯದ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿತು. ಮನವಿ ಸ್ವೀಕರಿಸಿದ ಮುಖ್ಯಮಂತ್ರಿ ಸಮಸ್ಯೆಗಳ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿ, ಶೀಘ್ರದಲ್ಲೇ ಸಭೆ ಕರೆದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಸಚಿವ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಬೆಳಗಾವಿ ಜಿಲ್ಲಾ ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷ ಡಾ. ಎ.ಬಿ. ಇಟಗಿ, ಪ್ರಧಾನ ಕಾರ್ಯದರ್ಶಿ ನೀಲಕಂಠ ಬೊಮ್ಮಣ್ಣವರ, ಎಸ್.ಬಿ. ಕುರಿ, ಬಿ.ಎಸ್. ಹೊಸಮನಿ, ಇರ್ಫಾನ್ ಕಿಲ್ಲೇದಾರ, ಮುತ್ತು ಜಿ. ಗಾಣಿಗೇರ ಸೇರಿದಂತೆ ಸಂಘದ ಪ್ರಮುಖರು ಉಪಸ್ಥಿತರಿದ್ದರು.

### ಸುಶಾಸನಕ್ಕೆ ವಿಶ್ವಾಸಾರ್ಹ ಅಂಕಿ-ಅಂಶಗಳೇ ಭದ್ರ ಅಡಿಪಾಯ: ಸಿ.ಆರ್. ಮುಂಡರಗಿ

# ನಿಖರ ದತ್ತಾಂಶವೇ ಅಭಿವೃದ್ಧಿಯ ದಿಕ್ಸೂಚಿ



**ವಿಜಯಸಾಕ್ಷಿ ಸುದ್ದಿ, ಗದಗ**

ಪಾರದರ್ಶಕ, ಜವಾಬ್ದಾರಿಯುತ ಹಾಗೂ ಜನಸ್ನೇಹಿ ಆಡಳಿತ ವ್ಯವಸ್ಥೆ ರೂಪಿಸಲು ನಿಖರವಾದ ಅಂಕಿ-ಅಂಶಗಳು ಮತ್ತು ಆಡಳಿತಾತ್ಮಕ ದತ್ತಾಂಶದ ಸಮರ್ಪಕ ಬಳಕೆ ಅತ್ಯಂತ ಅಗತ್ಯವಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿ ವತಿಯಿಂದ ಭಾರತೀಯ ಸಂಖ್ಯಾಶಾಸ್ತ್ರದ ಪಿತಾಮಹ ಪ್ರೊ. ಪಿ.ಸಿ. ಮಹಲನೋಬಿಸ್ ಅವರ ಜನ್ಮದಿನದ ಅಂಗವಾಗಿ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಸಂಖ್ಯಾಶಾಸ್ತ್ರ ದಿನ (ಮಹಲನೋಬಿಸ್ ದಿನಾಚರಣೆ) ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸಕ್ತ ವರ್ಷದ ಧ್ಯೇಯವಾದ ಆಡಳಿತಾತ್ಮಕ ದತ್ತಾಂಶದ ಸಾಮರ್ಥ್ಯವನ್ನು ಮುಕ್ತಗೊಳಿಸುವುದು ಎಂಬ ಪರಿಕಲ್ಪನೆಯನ್ನು ಪ್ರತಿಯೊಂದು ಸರ್ಕಾರಿ ಇಲಾಖೆಯ ಕಾರ್ಯವೈಖರಿಯಲ್ಲಿ ಅಳವಡಿಸಿಕೊಳ್ಳಬೇಕು.

ವಿಶ್ವಾಸಾರ್ಹ ದತ್ತಾಂಶದ ಆಧಾರದ ಮೇಲೆ ತೆಗೆದುಕೊಳ್ಳುವ ನಿರ್ಧಾರಗಳು ಆಡಳಿತದ ಗುಣಮಟ್ಟವನ್ನು ಮತ್ತಷ್ಟು ಉತ್ತಮಗೊಳಿಸುತ್ತವೆ ಎಂದು ಹೇಳಿದರು.

> **ನಿಖರ ಅಂಕಿ-ಅಂಶಗಳ ಆಧಾರದ ಮೇಲೆ ರೂಪಿಸುವ ನೀತಿಗಳು ಮತ್ತು ಯೋಜನೆಗಳೇ ಪರಿಣಾಮಕಾರಿ ಆಡಳಿತಕ್ಕೆ ಬಲ ನೀಡುತ್ತವೆ.**
> **- ಸಿ.ಆರ್. ಮುಂಡರಗಿ,**
> ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ

ವಿಶೇಷ ಉಪನ್ಯಾಸ ನೀಡಿದ ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲೆ ಜಯದೇವಿ ಅರಕೇರಿಮಠ ಮಾತನಾಡಿ, ಆಡಳಿತಾತ್ಮಕ ದತ್ತಾಂಶವನ್ನು ಕೇವಲ ದಾಖಲೆಯಾಗಿ ಸಂಗ್ರಹಿಸಿಡದೇ, ಅಭಿವೃದ್ಧಿ ಯೋಜನೆಗಳ ರೂಪುರೇಷೆ, ನೀತಿ ನಿರೂಪಣೆ ಹಾಗೂ ದೈನಂದಿನ ಆಡಳಿತಾತ್ಮಕ ನಿರ್ಧಾರಗಳಲ್ಲಿ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಮಾನವ ಅಭಿವೃದ್ಧಿ ಸೂಚ್ಯಂಕ ಸೇರಿದಂತೆ ವಿವಿಧ ಅಭಿವೃದ್ಧಿ ಮಾನದಂಡಗಳ ನಿರ್ಧಾರದಲ್ಲಿ ಸಂಖ್ಯಾಶಾಸ್ತ್ರದ ಪಾತ್ರ ಮಹತ್ವದ್ದಾಗಿದೆ.

ದೇಶದ ಆರ್ಥಿಕ ಮತ್ತು ಅಭಿವೃದ್ಧಿ ಯೋಜನೆಗಳಿಗೆ ಪ್ರೊ. ಪಿ.ಸಿ. ಮಹಲನೋಬಿಸ್ ಅವರ ಕೊಡುಗೆ ಶಾಶ್ವತವಾಗಿ ಸ್ಮರಣೀಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಬಿ.ಎಸ್. ಪಾಟೀಲ ಮಾತನಾಡಿ, ಇಲಾಖೆಯ ಸಿಬ್ಬಂದಿ ದತ್ತಾಂಶ ಸಂಗ್ರಹಣೆ ಮತ್ತು ನಿರ್ವಹಣೆಯಲ್ಲಿ ನಿಖರತೆಗೆ ಆದ್ಯತೆ ನೀಡಿ, ಜನಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಇಲಾಖೆಯ ಸಿಬ್ಬಂದಿ ಹಾಗೂ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಿವೃತ್ತ ಹಿರಿಯ ಅಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿ ಬಿ.ಎಲ್. ಕೊಪ್ಪಳ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು. ಸಾಂಖ್ಯಿಕ ನಿರೀಕ್ಷಕಿ ಶ್ರುತಿ ಕದಂ ಸ್ವಾಗತಿಸಿದರು. ಸಹಾಯಕ ನಿರ್ದೇಶಕ ಅರ್ಜುನ ಕಾರ್ಯಕ್ರಮ ನಿರೂಪಿಸಿದರು. ಗಣತಿದಾರ ಕಾವ್ಯ ಕುಸ್ಲಾಪೂರು ವಂದಿಸಿದರು.

# ನಾಳೆ ಪಂಚಮಸಾಲಿ ಸಾಧಕರಿಗೆ ಪ್ರತಿಭಾ ಪುರಸ್ಕಾರ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಲಿಂಗಾಯತ ಪಂಚಮಸಾಲಿ ಸಮಾಜದ ವತಿಯಿಂದ ಜುಲೈ 12ರಂದು ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಕಾರ್ಯಕ್ರಮ ನಡೆಯಲಿದೆ ಎಂದು ಸಮಾಜದ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2,230ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಸಲ್ಲಿಸಿದ್ದು, ಆಯ್ಕೆಯಾದವರಿಗೆ ಗೌರವಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಕೂಡಲ ಸಂಗಮದ ಶ್ರೀ ಬಸವಮೃತ್ಯುಂಜಯ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಮಾಜಿ ಸಚಿವ ಹಾಗೂ ನರಗುಂದ ಶಾಸಕ ಸಿ.ಸಿ. ಪಾಟೀಲ ಉದ್ಘಾಟಿಸಲಿದ್ದಾರೆ. ಮಾಜಿ ಸಚಿವ ಮುರಗೇಶ ನಿರಾಣಿ, ಶಾಸಕ ಅರವಿಂದ ಬೆಲ್ಲದ, ಮಾಜಿ ಸಚಿವ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯ ಲಿಂಗರಾಜ ಪಾಟೀಲ, ಶಿವಲೀಲಾ ಕುಲಕರ್ಣಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ರಮೇಶ ರೋಣದ, ಚಂದ್ರು ಪಾಟೀಲ, ಶರಣಪ್ಪ ಗೋಳಗೊಣಕಿ, ಕೆ.ವಿ. ಗದಗಿನ, ರವಿ ಮಾನೆ, ಕುಮಾರ ಗದಗಿನ, ಸಂಗಮೇಶ ಗೊಂದಿ, ಮಂಜುನಾಥ ಬಾಣದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಯಲ ಬೆಳಕಿನ ಕವಿ ಎ.ಎಸ್.ಮಕಾನದಾರರ ಸಾಹಿತ್ಯ ಸಾಧನೆಗೆ ಮತ್ತೊಂದು ಗೌರವ

# ನೋವನ್ನು ಕಾವ್ಯವಾಗಿಸಿದ ಅಕ್ಷರಯೋಗಿಗೆ ಕನಕ-ಶರೀಫ ಕಾವ್ಯ ಪುರಸ್ಕಾರ



ಕೆಲವು ಬದುಕುಗಳು ಹುಟ್ಟುವುದಿಲ್ಲ, ರೂಪುಗೊಳ್ಳುತ್ತವೆ. ಕೆಲವು ಕವಿಗಳು ಕವಿತೆಗಳನ್ನು ಬರೆಯುವುದಿಲ್ಲ; ತಮ್ಮ ಬದುಕನ್ನೇ ಕಾವ್ಯವನ್ನಾಗಿ ರೂಪಿಸುತ್ತಾರೆ. ಇನ್ನೂ ಕೆಲವು ವ್ಯಕ್ತಿತ್ವಗಳು ತಮ್ಮ ಜೀವನದ ಪ್ರತಿಯೊಂದು ನೋವನ್ನು ಸಮಾಜಕ್ಕೆ ಬೆಳಕಾಗಿಸುವ ಶಕ್ತಿಯಾಗಿ ಪರಿವರ್ತಿಸುತ್ತವೆ. ಅಂತಹ ಅಪರೂಪದ ವ್ಯಕ್ತಿತ್ವವೇ ಬಯಲ ಬೆಳಕಿನ ಕವಿಟಿ ಎ. ಎಸ್. ಮಕಾನದಾರ.

ಉತ್ತರ ಸಾಹಿತ್ಯ ವೇದಿಕೆ, ಹೆಬಸೂರು ನೀಡುವ 2024ನೇ ಸಾಲಿನ ಪ್ರತಿಷ್ಠಿತ ಕನಕಶರೀಫ ಕಾವ್ಯ ಪುರಸ್ಕಾರಟಿಕ್ಕೆ ಮಕಾನದಾರರು ಆಯ್ಕೆಯಾಗಿರುವುದು ಕೇವಲ ಒಬ್ಬ ಕವಿಗೆ ಸಂದ ಗೌರವವಲ್ಲ. ಅದು ಬದುಕಿನ ನೋವನ್ನು ಸಾಹಿತ್ಯದ ಸೌಂದರ್ಯವನ್ನಾಗಿ ರೂಪಿಸಿದ ಮಾನವೀಯ ಕಾವ್ಯಕ್ಕೆ ಸಂದ ಅಭಿವಂದನೆ.

ಮಕಾನದಾರರನ್ನು ಅರ್ಥ ಮಾಡಿಕೊಳ್ಳಬೇಕಾದರೆ ಮೊದಲು ಅವರ ಕವಿತೆಗಿಂತ ಅವರ ಬದುಕನ್ನು ಓದಬೇಕು. ಅವರ ಬದುಕನ್ನು ಓದಿದಾಗಲೇ ಅವರ ಸಾಹಿತ್ಯದ ಆಳ ಅರ್ಥವಾಗುತ್ತದೆ. ಏಕೆಂದರೆ ಅವರು ಕಲ್ಪನೆಯ ಲೋಕದಲ್ಲಿ ಕವಿತೆ ಕಟ್ಟಿದವರಲ್ಲ; ಅನುಭವದ ಗಾಯಗಳಲ್ಲೇ ಪದಗಳನ್ನು ಅರಳಿಸಿದವರು.

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಬೇಲೂರಿನಲ್ಲಿ ಜನಿಸಿದ ಮಕಾನದಾರರ ಬಾಲ್ಯ ಸುಖದ ತೊಟ್ಟಿಲಲ್ಲ, ಹಸಿವಿನ ಹಾದಿಯಲ್ಲೇ ಬೆಳೆದದ್ದು. ಹನ್ನೆರಡು ಮಕ್ಕಳ ದೊಡ್ಡ ಕುಟುಂಬದಲ್ಲಿ ಒಂಬತ್ತನೆಯ ಮಗನಾಗಿ ಜನಿಸಿದ ಅವರು ಬದುಕಿನ ವಿಶ್ವವಿದ್ಯಾಲಯದಲ್ಲೇ ಪದವಿ ಪಡೆದವರು.

ಟೇಲರಿಂಗ್ ಅಂಗಡಿಯಲ್ಲಿ ಕಾಜಿ ಗುಂಡಿ ಹೊಲಿಯುವುದರಿಂದ ಆರಂಭವಾದ ಬದುಕಿನ ಪಯಣ, ಹೊಲದ ಕೂಲಿ, ಬೈಕ್ ರಿಪೇರಿ ಅಂಗಡಿ, ನೇಕಾರಿಕೆ, ಹಣ್ಣಿನ ವ್ಯಾಪಾರ, ಐಸ್ ಕ್ರೀಂ ಮಾರಾಟ, ಪುಸ್ತಕದ ಅಂಗಡಿಯಲ್ಲಿ ಕೆಲಸ, ರಾತ್ರಿ ವೈನ್‌ಶಾಪ್‌ನಲ್ಲಿ ದುಡಿಮೆ ಹೀಗೆ ಹತ್ತಾರು ಉದ್ಯೋಗಗಳನ್ನು ದಾಟುತ್ತಾ ಸಾಗಿತು. ಬದುಕು ಯಾವ ಕೆಲಸ ಕೊಟ್ಟಿತೋ ಅದನ್ನು ಪ್ರಾಮಾಣಿಕವಾಗಿ ಮಾಡುತ್ತಲೇ ಅಕ್ಷರಗಳನ್ನು ಹೃದಯದಲ್ಲಿ ಸಂಗ್ರಹಿಸಿಕೊಂಡರು.

ಆದ್ದರಿಂದಲೇ ಅವರ ಕಾವ್ಯದಲ್ಲಿ ಕಣ್ಣೀರು ಕೇವಲ ರೂಪಕವಲ್ಲ; ಅದು ಬದುಕಿನ ಅನುಭವ. ನೋವು ಇದೆ, ಆದರೆ ನಿರಾಶೆ ಇಲ್ಲ. ಬಡತನ ಇದೆ, ಆದರೆ ಸೋಲಿನ ಭಾವನೆ ಇಲ್ಲ. ವಿರಹ ಇದೆ, ಆದರೆ ದ್ವೇಷ ಇಲ್ಲ. ಅವರ ಪ್ರತಿಯೊಂದು ಸಾಲಿನಲ್ಲೂ ಹರಿಯುವುದು ಮಾನವೀಯತೆಯ ನಿರ್ಮಲ ಹೊಳೆ.

ಮಕಾನದಾರರ ಕಾವ್ಯ ಓದುತ್ತಿದ್ದಂತೆ ಸೂಫಿ ಸಂತರ ಪ್ರೇಮದರ್ಶನವೂ ಕೇಳಿಸುತ್ತದೆ; ಬಸವಾದಿ ಶಿವಶರಣರ ಸಮಾನತೆಯ ಸಂದೇಶವೂ ಮೊಳಗುತ್ತದೆ. ಕನಕದಾಸರ ಮಾನವತೆಯ ಕಳಕಳಿ ಮತ್ತು ಶಿಶುನಾಳ ಶರೀಫರ ವಿಶ್ವಮಾನವತೆಯ ಕನಸು ಅವರ ಕಾವ್ಯದಲ್ಲಿ ಹೊಸ ರೂಪ ಪಡೆಯುತ್ತದೆ. ಅದಕ್ಕಾಗಿಯೇ ಅವರಿಗೆ ಲಭಿಸಿರುವ ಕನಕಶರೀಫ ಕಾವ್ಯ ಪುರಸ್ಕಾರಟಿ ಅವರ ಸಾಹಿತ್ಯದ ತಾತ್ವಿಕ ಎತ್ತರಕ್ಕೆ ಸಲ್ಲುವ ಗೌರವವಾಗಿದೆ.

ಕವಿಯಾಗಿ ಮಾತ್ರವಲ್ಲದೆ ಕಥೆಗಾರ, ಅಂಕಣಕಾರ, ಸಂಪಾದಕ, ಪ್ರಕಾಶಕ, ಉಪನ್ಯಾಸಕ ಹಾಗೂ ಸಂಘಟಕರಾಗಿ ಅವರು ಕನ್ನಡ ಸಾಹಿತ್ಯಕ್ಕೆ ಅನನ್ಯ ಕೊಡುಗೆ ನೀಡಿದ್ದಾರೆ. ನಾಲ್ವತ್ತಕ್ಕೂ ಹೆಚ್ಚು ಕೃತಿಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿರುವ ಅವರು, ಅಕ್ಕಡಿ ಸಾಲುಟಿ, ಪ್ಯಾರಿ ಪದ್ಯಟಿ, ದರ್ವೇಶಿ ಪದ್ಯಟಿ, ಉಸಿರ ಗಂಧ ಸೋಕಿಟಿ, ಒಂದು ಮೌನದ ಬೀಜಟಿ, ಬದುಕು ಬೆಳಕುಟಿ, ನೆಲದ ನುಡಿಟಿ ಸೇರಿದಂತೆ ಅನೇಕ ಕೃತಿಗಳ ಮೂಲಕ ಓದುಗರ ಮನಸ್ಸಿನಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ.

ಅವರ ಅಮ್ಮನ ಬಿಕ್ಕಳಿಕೆ ನಿಲ್ಲಿಸುವಿರಾ?ಟಿ ಹಾಗೂ ಲಾಂದ್ರದ ಬೆಳಕಲ್ಲಿ ಅವ್ವಟಿ ಕವಿತೆಗಳು ವಿಶ್ವವಿದ್ಯಾಲಯಗಳ ಪದವಿ ಪಠ್ಯಕ್ರಮದಲ್ಲಿ ಸ್ಥಾನ ಪಡೆದಿರುವುದು ಅವರ ಸಾಹಿತ್ಯದ ಸಾಮಾಜಿಕ ಪ್ರಸ್ತುತತೆಗೆ ಸಾಕ್ಷಿಯಾಗಿದೆ.

ಆದರೆ ಮಕಾನದಾರರ ದೊಡ್ಡ ಸಾಧನೆ ಪುಸ್ತಕಗಳ ಸಂಖ್ಯೆಯಲ್ಲ; ಅವರು ರೂಪಿಸಿದ ಮನುಷ್ಯರ ಸಂಖ್ಯೆಯಲ್ಲಿ. ನಿರಂತರ ಪ್ರಕಾಶನದ ಮೂಲಕ ನೂರಾರು ಹೊಸ ಲೇಖಕರಿಗೆ ಅವಕಾಶ ಕಲ್ಪಿಸಿದ ಅವರು, ತಮ್ಮ ಹೆಸರು ಬೆಳೆಯುವುದಕ್ಕಿಂತ ಇನ್ನೊಬ್ಬ ಲೇಖಕ ಬೆಳೆಯಬೇಕು ಎಂಬ ಮನೋಭಾವವನ್ನು ಬದುಕಿನಲ್ಲಿ ಅನುಸರಿಸಿದರು.

ಮಕಾನದಾರರು ಬರೆದದ್ದಕ್ಕಿಂತ ಬರೆಸಿದ್ದೇ ಹೆಚ್ಚು ಎಂಬ ಮಾತು ಸಾಹಿತ್ಯ ವಲಯದಲ್ಲಿ ಕೇಳಿಬರುವುದು ಅವರ ವ್ಯಕ್ತಿತ್ವದ ನಿಜವಾದ ಪರಿಚಯ.

ನ್ಯಾಯಾಂಗ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಲೇ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪುರಸ್ಕಾರ ಪಡೆದ ಅವರು, ನಿವೃತ್ತಿಯ ಬಳಿಕವೂ ವಿಶ್ರಾಂತಿ ಪಡೆಯದೆ ಸಮಾಜಸೇವೆಯ ದಾರಿಯನ್ನೇ ಆರಿಸಿಕೊಂಡರು. ಆಸ್ಪತ್ರೆಗಳು, ಬಸ್ ನಿಲ್ದಾಣಗಳು, ರೈಲು ನಿಲ್ದಾಣಗಳಲ್ಲಿ ಆಹಾರ ಕಿಟ್ ವಿತರಣೆ, ಕನ್ನಡ ಶಾಲೆಗಳ ಉಳಿವಿಗಾಗಿ ಜಾಗೃತಿ, ಭಾವೈಕ್ಯತಾ ಕಾರ್ಯಕ್ರಮಗಳು, ಸಾಹಿತ್ಯ ಸಮ್ಮೇಳನಗಳು ಹೀಗೆ ಅವರ ಸೇವೆ ನಿರಂತರವಾಗಿದೆ.

ಅವರ ಕೃತಿಗಳು ಹಲವು ಭಾರತೀಯ ಭಾಷೆಗಳಿಗೆ ಅನುವಾದಗೊಂಡಿವೆ. ಆದರೆ ಅನುವಾದಿಸಲಾಗದ ಒಂದು ಸಂಗತಿ ಇದೆಅದು ಅವರ ಮಾನವೀಯತೆ. ಭಾಷೆಯ ಎಲ್ಲೆಗಳನ್ನು ಮೀರಿ ಅದು ನೇರವಾಗಿ ಓದುಗರ ಹೃದಯವನ್ನು ತಲುಪುತ್ತದೆ.

ಇಂದು ಕನ್ನಡ ಸಾಹಿತ್ಯದಲ್ಲಿ ಕವಿಗಳು ಅನೇಕರಿದ್ದಾರೆ. ಆದರೆ ಬದುಕನ್ನೇ ಕಾವ್ಯವನ್ನಾಗಿ ರೂಪಿಸಿಕೊಂಡವರು ವಿರಳ. ಮಕಾನದಾರರು ಆ ವಿರಳ ಸಾಲಿನ ಅಕ್ಷರಯೋಗಿ.

ಅವರು ಕವಿತೆ ಬರೆಯುವುದಿಲ್ಲ; ಬದುಕನ್ನು ಬರೆಯುತ್ತಾರೆ. ಪದಗಳನ್ನು ಜೋಡಿಸುವುದಿಲ್ಲ; ಮನುಷ್ಯರನ್ನು ಜೋಡಿಸುತ್ತಾರೆ. ಬೆಳಕನ್ನು ಹುಡುಕುವುದಿಲ್ಲ; ತಾವೇ ಬೆಳಕಾಗುತ್ತಾರೆ. ಅದಕ್ಕಾಗಿಯೇ ಗದಗಿನ ಸಾಹಿತ್ಯ ಲೋಕ ಅವರನ್ನು ಪ್ರೀತಿಯಿಂದ ಬಯಲ ಬೆಳಕಿನ ಕವಿಟಿ ಎಂದು ಕರೆಯುತ್ತದೆ.

ಜುಲೈ 11ರಂದು ಗೊಟಗೋಡಿಯ ಉತ್ಸವ ರಾಕ್ ಗಾರ್ಡನ್‌ನಲ್ಲಿ ಪ್ರದಾನವಾಗಲಿರುವ ಕನಕಶರೀಫ ಕಾವ್ಯ ಪುರಸ್ಕಾರಟಿ ಕೇವಲ ಒಬ್ಬ ಸಾಹಿತಿಯ ಗೌರವವಲ್ಲ. ಅದು ಕನ್ನಡ ಸಾಹಿತ್ಯದ ಮಾನವೀಯ ಪರಂಪರೆಗೆ ಸಲ್ಲುವ ಗೌರವದ ನಮನ.

ನೋವನ್ನು ಪದಗಳನ್ನಾಗಿ, ಪದಗಳನ್ನು ಪ್ರೀತಿಯನ್ನಾಗಿ, ಪ್ರೀತಿಯನ್ನು ಮಾನವೀಯತೆಯನ್ನಾಗಿ ರೂಪಿಸಿದ ಈ ಅಪರೂಪದ ಅಕ್ಷರಯೋಗಿ ಇನ್ನೂ ದೀರ್ಘಕಾಲ ಕನ್ನಡ ಸಾರಸ್ವತ ಲೋಕವನ್ನು ಬೆಳಗಲಿ. ಏಕೆಂದರೆ ಮಕಾನದಾರರಂತಹವರು ಬರೆಯುವವರೆಗೂ ಕನ್ನಡ ಸಾಹಿತ್ಯದ ಬಯಲಿನಲ್ಲಿ ಬೆಳಕು ಎಂದಿಗೂ ಮಂಕಾಗುವುದಿಲ್ಲ.

**– ಅಮೀರನಾಯಕ (ಕಲ್ಲಿಗನೂರ), ಗದಗ**

# ಜನಸಂಖ್ಯೆ ನಿಯಂತ್ರಿಸಿ, ಜೀವಸಂಕುಲ ಉಳಿಸಿ

ವಿಶ್ವದ ಜನಸಂಖ್ಯೆಯ ಅರ್ಧದಷ್ಟು ಜನರು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿದ್ದು, ಬಡತನ ಮತ್ತು ಅಸಮಾನತೆಗಳು ಮಾನವ ಅಭಿವೃದ್ಧಿಗೆ ದೊಡ್ಡ ಸವಾಲಾಗಿವೆ ಎಂಬ ಮಾಜಿ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಮಾತು ಇಂದಿಗೂ ಪ್ರಸ್ತುತವಾಗಿದೆ.

ಭೂಮಿ ಮನುಷ್ಯನ ಅಗತ್ಯಗಳನ್ನು ಪೂರೈಸಬಲ್ಲದು, ಆದರೆ ಮನುಷ್ಯನ ಅತಿಯಾದ ಆಸೆಗಳನ್ನು ಪೂರೈಸಲು ಸಾಧ್ಯವಿಲ್ಲ. ದಿನದಿಂದ ದಿನಕ್ಕೆ ಏರುತ್ತಿರುವ ಜನಸಂಖ್ಯೆ ಆಹಾರ, ನೀರು, ವಸತಿ, ಆರೋಗ್ಯ, ಶಿಕ್ಷಣ, ಉದ್ಯೋಗ ಮತ್ತು ಪರಿಸರದ ಮೇಲೆ ಭಾರೀ ಒತ್ತಡವನ್ನುಂಟು ಮಾಡುತ್ತಿದೆ. ಹೀಗಾಗಿ ಜನ ಸಂಖ್ಯೆ ನಿಯಂತ್ರಣವು ಕೇವಲ ಸರ್ಕಾರದ ಜವಾ ಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಹೊಣೆಗಾರಿಕೆಯಾಗಿದೆ.

ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ಸಾಮಾಜಿಕ, ಆರ್ಥಿಕ ಹಾಗೂ ಪರಿಸರ ಸಮಸ್ಯೆಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಪ್ರತಿವರ್ಷ ಜುಲೈ 11ರಂದು ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತದೆ.

1987ರ ಜುಲೈ 11ರಂದು ವಿಶ್ವದ ಜನಸಂಖ್ಯೆ 500 ಕೋಟಿಯನ್ನು ದಾಟಿತ್ತು. ಈ ಬೆಳವಣಿಗೆ ವಿಶ್ವಸಂಸ್ಥೆಯ ಗಮನ ಸೆಳೆದಿದ್ದು, 1989ರಿಂದ ವಿಶ್ವಸಂಸ್ಥೆಯ ಅಭಿವೃದ್ಧಿ ಕಾರ್ಯಕ್ರಮ ನೇತೃತ್ವದಲ್ಲಿ ಜುಲೈ 11ರಂದು ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತಿದೆ. ಇಂದು 200ಕ್ಕೂ ಹೆಚ್ಚು ದೇಶಗಳಲ್ಲಿ ಈ ದಿನವನ್ನು ಆಚರಿಸಿ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.


ಭಾರತವು 2023ರಿಂದ ವಿಶ್ವದಲ್ಲೇ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ದೇಶವಾಗಿದೆ. ಹೆಚ್ಚುತ್ತಿರುವ ಜನಸಂಖ್ಯೆ ಅಭಿವೃದ್ಧಿಗೆ ಶಕ್ತಿಯಾಗಬಹುದಾದರೂ, ಅದನ್ನು ಸಮರ್ಪಕವಾಗಿ ನಿರ್ವಹಿಸದಿದ್ದರೆ ಅದು ನಿರುದ್ಯೋಗ, ಬಡತನ, ವಸತಿ ಸಮಸ್ಯೆ, ನೀರಿನ ಅಭಾವ, ಪರಿಸರ ಮಾಲಿನ್ಯ ಹಾಗೂ ಸಂಪನ್ಮೂಲಗಳ ಕೊರತೆಯಂತಹ ಗಂಭೀರ ಸಮಸ್ಯೆಗಳಿಗೆ ಕಾರಣವಾಗುತ್ತದೆ.

ವಿಶ್ವ ಜನಸಂಖ್ಯಾ ದಿನವು ಕೇವಲ ಆಚರಣೆಯ ದಿನವಲ್ಲ. ಇದು ಜವಾಬ್ದಾರಿಯುತ ಕುಟುಂಬ ನಿರ್ಮಾಣ, ಮಹಿಳಾ ಸಬಲೀಕರಣ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದ ಸಂಕಲ್ಪದ ದಿನವಾಗಿದೆ.

ಜನಸಂಖ್ಯೆ ನಿಯಂತ್ರಣವು ಕಾನೂನಿನಿಂದ ಮಾತ್ರ ಸಾಧ್ಯವಲ್ಲ. ಶಿಕ್ಷಣ, ಅರಿವು, ಮಹಿಳಾ ಸಬಲೀಕರಣ ಮತ್ತು ಕುಟುಂಬ ಯೋಜನೆಯ ಯಶಸ್ವಿ ಅನುಷ್ಠಾನದಿಂದ ಮಾತ್ರ ಶಾಶ್ವತ ಫಲಿತಾಂಶ ಸಾಧ್ಯ. ಇಂದು ನಾವು ತೆಗೆದುಕೊಳ್ಳುವ ಜವಾಬ್ದಾರಿಯುತ ನಿರ್ಧಾರಗಳೇ ಮುಂದಿನ ಪೀಳಿಗೆಗೆ ಸುರಕ್ಷಿತ ಭವಿಷ್ಯವನ್ನು ಕಟ್ಟಿಕೊಡಲಿವೆ.

ಜನಸಂಖ್ಯೆಯನ್ನು ನಿಯಂತ್ರಿಸಿದರೆ ಮಾತ್ರ ಪ್ರಕೃತಿಯನ್ನು ಉಳಿಸಬಹುದು, ಪ್ರಕೃತಿ ಉಳಿದರೆ ಮಾತ್ರ ಜೀವಸಂಕುಲ ಉಳಿಯುತ್ತದೆ.

**-ಬಸವರಾಜ ಎಂ. ಯರಗುಪ್ಪಿ**
ಶಿಕ್ಷಕರು ಹಾಗೂ ಹವ್ಯಾಸಿ ಬರಹಗಾರರು
ರಾಮಗೇರಿ, ತಾ. ಲಕ್ಷ್ಮೇಶ್ವರ, ಜಿ. ಗದಗ.




### ಜನಸಂಖ್ಯೆ ಹೆಚ್ಚಳದ ಪರಿಣಾಮಗಳು

1. ನಿರುದ್ಯೋಗ ಮತ್ತು ಬಡತನ ಹೆಚ್ಚಳ.
2. ಕೃಷಿ ಭೂಮಿ ಹಾಗೂ ಅರಣ್ಯ ಪ್ರದೇಶಗಳ ಕ್ಷೀಣತೆ.
3. ಕುಡಿಯುವ ನೀರಿನ ಕೊರತೆ.
4. ಪರಿಸರ ಮಾಲಿನ್ಯ ಮತ್ತು ಹವಾಮಾನ ಬದಲಾವಣೆ.
5. ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳ ಮೇಲೆ ಹೆಚ್ಚುವರಿ ಒತ್ತಡ.
6. ನಗರೀಕರಣದ ವೇಗದಿಂದ ಮೂಲಸೌಕರ್ಯಗಳ ಕೊರತೆ.

### ಈ ದಿನದ ಪ್ರಮುಖ ಉದ್ದೇಶಗಳು

1. ಕುಟುಂಬ ಯೋಜನೆ ಕುರಿತು ಅರಿವು ಮೂಡಿಸುವುದು.
2. ತಾಯಿ ಮತ್ತು ಶಿಶು ಆರೋಗ್ಯಕ್ಕೆ ಆದ್ಯತೆ ನೀಡುವುದು.
3. ಮಹಿಳೆಯರ ಶಿಕ್ಷಣ ಮತ್ತು ಹಕ್ಕುಗಳನ್ನು ಬಲಪಡಿಸುವುದು.
4. ಲಿಂಗ ಸಮಾನತೆ ಉತ್ತೇಜಿಸುವುದು.
5. ಸಂತಾನೋತ್ಪತ್ತಿ ಆರೋಗ್ಯ ಸೇವೆಗಳ ಬಗ್ಗೆ ಜಾಗೃತಿ ಮೂಡಿಸುವುದು.
6. ಯುವಜನರಲ್ಲಿ ಜವಾಬ್ದಾರಿಯುತ ಜೀವನ ಮೌಲ್ಯಗಳನ್ನು ಬೆಳೆಸುವುದು.

### ರೋಟರಿ ಸೆಂಟ್ರಲ್ ನೂತನ ಅಧ್ಯಕ್ಷ ಮಲ್ಲಿಕಾರ್ಜುನ ಚಂದಪ್ಪನವರ, ಕಾರ್ಯದರ್ಶಿ ಪರಶುರಾಮ ನಾಯ್ಕರಗೆ ಸನ್ಮಾನ

## ಸಮಾಜಸೇವೆಗೆ ಹೊಸ ಚೈತನ್ಯ ತುಂಬುವ ಸಂಕಲ್ಪ



**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜಸೇವೆ ಮೂಲಕ ಸದೃಢ ಸಮಾಜ ನಿರ್ಮಾಣ ಮಾಡುವ ಕನಸಿನೊಂದಿಗೆ ರೋಟರಿ ಸೆಂಟ್ರಲ್ ಅಧ್ಯಕ್ಷ ಸ್ಥಾನ ವಹಿಸಿಕೊಂಡಿದ್ದು, ಸದಸ್ಯರ ಸಹಕಾರದೊಂದಿಗೆ ವರ್ಷಪೂರ್ತಿ ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ರೋಟರಿ ಸೆಂಟ್ರಲ್‌ನ ನೂತನ ಅಧ್ಯಕ್ಷ ಮಲ್ಲಿಕಾರ್ಜುನ ಚಂದಪ್ಪನವರ ಹೇಳಿದರು.

ನಗರದ ಬ್ಯಾಂಕ್ ರಸ್ತೆಯಲ್ಲಿರುವ ಅಧ್ಯಕ್ಷರ ಕಚೇರಿಯಲ್ಲಿ ಆಯೋಜಿಸಿದ್ದ ನೂತನ ಅಧ್ಯಕ್ಷ ಮಲ್ಲಿಕಾರ್ಜುನ ಚಂದಪ್ಪನವರ ಹಾಗೂ ನೂತನ ಕಾರ್ಯದರ್ಶಿ ಪರಶುರಾಮ ನಾಯ್ಕರ ಅವರ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರೂ ತಮ್ಮ ಆದಾಯದ ಒಂದು ಭಾಗವನ್ನು ಸಮಾಜದ ಸಂಕಷ್ಟದಲ್ಲಿರುವವರಿಗೆ ಮೀಸಲಿಟ್ಟಾಗ ಮಾತ್ರ ಸಮಾಜದಲ್ಲಿ ಅರ್ಥಪೂರ್ಣ ಬದಲಾವಣೆ ಸಾಧ್ಯ ಎಂದರು.

ಈ ವರ್ಷ ರೋಟರಿ ಸೆಂಟ್ರಲ್ ವತಿಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ, ಶಾಲಾ ಮಕ್ಕಳಿಗೆ ಅಗತ್ಯ ಸೌಲಭ್ಯಗಳ ವಿತರಣೆ, ಪರಿಸರ ಸಂರಕ್ಷಣೆಗೆ ವೃಕ್ಷಾರೋಪಣ, ರಕ್ತದಾನ ಶಿಬಿರ, ಮಹಿಳಾ ಸಬಲೀಕರಣ ಹಾಗೂ ಯುವಜನರ ಕೌಶಲ್ಯಾಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ನೂತನ ಕಾರ್ಯದರ್ಶಿ ಪರಶುರಾಮ ನಾಯ್ಕರ ಮಾತನಾಡಿ, ಅಧ್ಯಕ್ಷರೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಗದಗ ರೋಟರಿ ಸೆಂಟ್ರಲ್ ಅನ್ನು ಜಿಲ್ಲೆಯ ಮಾದರಿ ಸಂಸ್ಥೆಯನ್ನಾಗಿ ರೂಪಿಸಲು ಎಲ್ಲ ಸದಸ್ಯರ ಸಹಕಾರದೊಂದಿಗೆ ಶ್ರಮಿಸಲಾಗುವುದು ಎಂದು ಹೇಳಿದರು.

ಯುವ ಮುಖಂಡ ಶ್ರೀಕಾಂತ ಬಾಕಳೆ ಮಾತನಾಡಿ, ಸಮಾಜಸೇವೆಯಲ್ಲಿ ಈಗಾಗಲೇ ಗುರುತಿಸಿಕೊಂಡಿರುವ ಇಬ್ಬರೂ ಪದಾಧಿಕಾರಿಗಳು ಇನ್ನಷ್ಟು ಜನಪರ ಕಾರ್ಯಗಳನ್ನು ಕೈಗೊಂಡು ಜಿಲ್ಲೆಯ ಹೆಮ್ಮೆ ಹೆಚ್ಚಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಎಸ್.ಕೆ. ತಗ್ಗಿನಮಠ, ಬಸವರಾಜ ಹಡಪದ, ರಾಮಚಂದ್ರ ಶಿದ್ಲಿಂಗ, ರಾಘವೇಂದ್ರ ಪವಾರ, ರಾಜೇಶ್ ಖೋಡೆ, ಉಮೇಶ ಮುಳ್ಳಾಳ, ಉದಯ ಜಾಧವ, ಲಿಂಗರಾಜ ಚಂದಪ್ಪನವರ, ಎಸ್.ಎಸ್. ಬಾಸಗಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ನಿನ್ನ ಛಾಯೆ... ನನ್ನೊಳಗಿನ ಮಾಯೆ

ಕಾಯ್ದು ಕುಳಿತ ರೈತನಿಗೆ
ಮಳೆ ಸುರಿದು ನಗುವ ತಂದಂತಿರುವೆ.

ಕಲ್ಪನೆಯ ಲೋಕದ ಕವಿಗೆ
ಒಂಟಿತನದ ಸಂಗಾತಿಯಾದಂತಿರುವೆ.

ವರಕವಿಯಾಗುವ ಭಾಗ್ಯ ನನಗಿಲ್ಲ,
ವರ ಕೇಳುವ ದಿನ ಬಂದರೆ
ವಧುವಾಗಿ ನಿನ್ನನ್ನೇ ಬೇಡುವೆ.

ಬದುಕೇ ಸಾಕೆನಿಸಿದ ಕ್ಷಣದಲ್ಲಿ
ಬೆಳಕಾಗಿ ಬಂದವಳು ನೀನೇ.
ನೋವನ್ನು ಮನದೊಳಗೆ ನುಂಗಿದಾಗ
ಮನವನ್ನೇ ಆವರಿಸಿದವಳು ನೀನೇ.

ಕಾರಣಗಳೇಕೆ ಬೇಕು?
ಕಣ್ಮುಂದೆ ನೀನಿರುವಾಗ.
ಕಂಬನಿಯೂ ಸೋತುಹೋಗುತ್ತದೆ,
ನಿನ್ನ ರೂಪಲಾವಣ್ಯ
ನನ್ನ ಕಣ್ಣೀರನ್ನು ಒರೆಸಿದಾಗ.

ಸಾಲುಗಳು ತವಕಿಸುತ್ತಿವೆ
ನಿನ್ನ ವರ್ಣನೆ ಹಾಡಲು.
ರಾಗಗಳು ಕಾತರಿಸುತ್ತಿವೆ
ನಿನ್ನ ಇಂಪಾದ ಧ್ವನಿ ಕೇಳಲು.

ಸಾಕು... ಈ ನಾಟಕವಿನ್ನು,
ಮತ್ತೊಮ್ಮೆ ಕೇಳು ನನ್ನ ಮನದ ಒಲವನ್ನು.

ಸೋಲಲು ಸಿದ್ಧನಿದ್ದೇನೆ
ಮತ್ತೊಮ್ಮೆ ನಿನ್ನ ಮುಂದೆ.
ಗೆದ್ದುಬಿಡು ನನ್ನ ಮನಸನ್ನು,
ಇನ್ನೊಮ್ಮೆ... ಎಂದೆಂದಿಗೂ.

**-ಪ್ರವೀಣ ಸಂಗಳದಶೆಟ್ಟರ್**
ವಕೀಲರು, ಶಿರೋಳ, ತಾ. ನರಗುಂದ.

### ಕೈಕಾಲು ಗಟ್ಟಿಯಾಗಿರುವಾಗಲೇ ಪವಿತ್ರ ಕ್ಷೇತ್ರಗಳ ದರ್ಶನ ಮಾಡಬೇಕು: ಅಡ್ನೂರ ಶ್ರೀಗಳ ಕರೆ

# ಪುಣ್ಯಕ್ಷೇತ್ರಗಳ ಯಾತ್ರೆಯಿಂದ ಜೀವನ ಸಾರ್ಥಕ

**ವಿಜಯಸಾಕ್ಷಿ ಸುದ್ದಿ, ಗದಗ**

ಪುಣ್ಯಕ್ಷೇತ್ರಗಳ ಯಾತ್ರೆ ಹಾಗೂ ದರ್ಶನದಿಂದ ಮಾನವ ಜನ್ಮ ಸಾರ್ಥಕವಾಗುವುದಲ್ಲದೆ ಪುಣ್ಯದ ಫಲವೂ ಲಭಿಸುತ್ತದೆ. ಆದ್ದರಿಂದ ಕೈಕಾಲು ಗಟ್ಟಿಯಾಗಿರುವಾಗಲೇ ಪವಿತ್ರ ಕ್ಷೇತ್ರಗಳ ಯಾತ್ರೆ ಕೈಗೊಂಡು ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಅಡ್ನೂರು ಬೃಹನ್ಮಠದ ಪರಮಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ಅಡವೀಂದ್ರಸ್ವಾಮಿ ಮಠದ ಅನ್ನಪೂರ್ಣೇಶ್ವರಿ ಮಂದಿರದಲ್ಲಿ ನಡೆದ ಶ್ರೀಮಠದ 349ನೇ ಮಾಸಿಕ ಶಿವಾನುಭವ ಹಾಗೂ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಪುಣ್ಯಕ್ಷೇತ್ರಗಳ ದರ್ಶನದಿಂದ ಆಧ್ಯಾತ್ಮಿಕ ನೆಮ್ಮದಿ ಹಾಗೂ ಬದುಕಿಗೆ ಹೊಸ ಅರ್ಥ ಸಿಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಸಮ್ಮುಖ ವಹಿಸಿದ್ದ ಶ್ರೀ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ವೇ. ಶ್ರೀ ಮಹೇಶ್ವರ ಸ್ವಾಮಿಗಳು, ಲಿಂಗೈಕ್ಯ ಗಂಗಾಧರ ಮಹಾಸ್ವಾಮಿಗಳು, ಉದ್ಯಮಿ ಕೆ. ಸುಧಾಕರ್ ರಾವ್, ಶಿಕ್ಷಣ ತಜ್ಞ ಡಾ. ಬಿ.ಎಫ್. ದಂಡಿನ ಹಾಗೂ ಸಂಗೀತ ಸೇವಕ ಪಾಂಡುರಂಗ ಕುರ್ತಕೋಟಿ ಅವರ ಸಮಾಜಮುಖಿ ಸೇವೆಯನ್ನು ಸ್ಮರಿಸಿದರು.

ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ್ದ ಹುಬ್ಬಳ್ಳಿಯ ಕೆಎಲ್‌ಇ ತಾಂತ್ರಿಕ ಮಹಾವಿದ್ಯಾಲಯದ ಪ್ರೊ. ವಿರೂಪಾಕ್ಷಯ್ಯ ಹೊಸಳ್ಳಿಮಠ ಮಾತನಾಡಿ, ಕೇದಾರನಾಥ ಹಾಗೂ ಬದರಿನಾಥದಂತಹ ಹಿಮಾಲಯದ ಪುಣ್ಯಕ್ಷೇತ್ರಗಳ ದರ್ಶನ ಜೀವನದಲ್ಲಿ ಒಮ್ಮೆಯಾದರೂ ಪಡೆಯುವುದು ಪ್ರತಿಯೊಬ್ಬರಿಗೂ ಸಿಗಬೇಕಾದ ಅಪರೂಪದ ಭಾಗ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿಯ ಅಧ್ಯಕ್ಷ ಹಾಗೂ ಸಾಹಿತಿ ಡಾ. ರಾಜೇಂದ್ರ ಎಸ್. ಗಡಾದ ಮಾತನಾಡಿ, ಶಾರದಾ, ಕೇದಾರ, ಬದರಿನಾಥ ಸೇರಿದಂತೆ ಪವಿತ್ರ ಕ್ಷೇತ್ರಗಳ ಯಾತ್ರೆಯಿಂದ ಮನಸ್ಸಿಗೆ ಶಾಂತಿ ದೊರೆಯುವುದರ ಜೊತೆಗೆ ಜೀವನದ ಮೌಲ್ಯಗಳನ್ನು ಅರ್ಥೈಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.



ಈ ಸಂದರ್ಭದಲ್ಲಿ ಕೇದಾರನಾಥ-ಬದರಿನಾಥ ಸೇರಿದಂತೆ ವಿವಿಧ ಪುಣ್ಯಕ್ಷೇತ್ರಗಳ ದರ್ಶನ ಮಾಡಿದ ಪ್ರೊ. ವಿರೂಪಾಕ್ಷಯ್ಯ ಹೊಸಳ್ಳಿಮಠ ದಂಪತಿ, ವಿಜಯಕುಮಾರ ಹಿರೇಮಠ ದಂಪತಿ, ಸಾಹಿತಿ ಡಾ. ರಾಜೇಂದ್ರ ಎಸ್. ಗಡಾದ ಹಾಗೂ ಶ್ರೀಮತಿ ಜ್ಯೋತಿ ಗಡಾದ, ಕಬಾಡಿ ಸಹೋದರ ದಂಪತಿ ಅವರನ್ನು ಶ್ರೀಮಠದ ವತಿಯಿಂದ ಗುರುರಕ್ಷೆ ನೀಡಿ ಸನ್ಮಾನಿಸಲಾಯಿತು.

ಗುರುಪೂರ್ಣಿಮೆ ಕುರಿತು ಸುಜಾತ ದೊಡ್ಡಮನಿ ಉಪನ್ಯಾಸ ನೀಡಿದರೆ, ಲಿಂಗೈಕ್ಯ ಗಂಗಾಧರ ಮಹಾಸ್ವಾಮಿಗಳ ಕುರಿತು ಚನ್ನಬಸಯ್ಯ ಹೇಮಗಿರಿಮಠ ನುಡಿನಮನ ಸಲ್ಲಿಸಿದರು. ಇದೇ ವೇಳೆ ಥೈಲ್ಯಾಂಡ್ ಪ್ರವಾಸ ಮುಗಿಸಿಕೊಂಡು ಬಂದ ಸವಿತಾ ಹೊಸಳ್ಳಿಮಠಗುರಪ್ಪ ನಿಡಗುಂದಿ ದಂಪತಿ ಹಾಗೂ ಹುಟ್ಟುಹಬ್ಬದ ಅಂಗವಾಗಿ ಶ್ರೀಮತಿ ಬಳಿಗಾರ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರೊ. ಸಿ. ಲಿಂಗಾರೆಡ್ಡಿ, ಚನ್ನಬಸಪ್ಪ ಕಾಳಗಿ, ಡಾ. ಎಲ್.ವಿ. ಪಾಟೀಲ, ಬಿ.ಎಂ. ಬೀಳೆಯಲಿ, ಜಿ.ಎಂ. ಯಾನಂಶೆಟ್ಟಿ, ಸುಶೀಲಾ ಕೋಟಿ ಸೇರಿದಂತೆ ಶಿವಾನುಭವ ಸಮಿತಿಯ ಸದಸ್ಯರು ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಹೌದು. ಈ ಸುದ್ದಿಯಲ್ಲಿ ಪುಣ್ಯಕ್ಷೇತ್ರ ಯಾತ್ರೆಯ ಮಹತ್ವ ವಿಷಯವನ್ನು ಬಾಕ್ಸ್ ಮಾಡಿದರೆ ಪತ್ರಿಕೆಯಲ್ಲಿ ಚೆನ್ನಾಗಿ ಹೈಲೈಟ್ ಆಗುತ್ತದೆ.

### ಜೀವನದಲ್ಲಿ ಒಮ್ಮೆಯಾದರೂ ಕೇದಾರ-ಬದರಿನಾಥ ದರ್ಶನ ಮಾಡಿ

ಹಿಮಾಲಯದ ಕೇದಾರನಾಥ, ಬದರಿನಾಥ ಸೇರಿದಂತೆ ಪವಿತ್ರ ಕ್ಷೇತ್ರಗಳ ದರ್ಶನ ಜೀವನದಲ್ಲಿ ಒಮ್ಮೆಯಾದರೂ ಪಡೆಯಬೇಕು. ಇಂತಹ ಯಾತ್ರೆಗಳು ಆಧ್ಯಾತ್ಮಿಕ ನೆಮ್ಮದಿ ನೀಡುವುದರ ಜೊತೆಗೆ ಬದುಕಿನ ಮೌಲ್ಯಗಳನ್ನು ಅರ್ಥೈಸಿಕೊಳ್ಳಲು ಸಹಕಾರಿಯಾಗುತ್ತವೆ ಎಂದು ಕೆಎಲ್‌ಇ ತಾಂತ್ರಿಕ ಮಹಾವಿದ್ಯಾಲಯದ ಪ್ರೊ. ವಿರೂಪಾಕ್ಷಯ್ಯ ಹೊಸಳ್ಳಿಮಠ ಹೇಳಿದರು.

# 16 ಸಹಕಾರ ಸಂಘಗಳ ಸಮಾಪನೆ ಪ್ರಕ್ರಿಯೆ ಆರಂಭ: ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ರೋಣ ಹಾಗೂ ಗಜೇಂದ್ರಗಡ ತಾಲೂಕಿನ 16 ಸಹಕಾರ ಸಂಘಗಳ ಸಮಾಪನೆ ಪ್ರಕ್ರಿಯೆ ಆರಂಭವಾಗಿದ್ದು, ಸಂಘಗಳಿಗೆ ಸಂಬಂಧಿಸಿದ ಯಾವುದೇ ಬಾಕಿ ವ್ಯವಹಾರ, ಹಕ್ಕು ಅಥವಾ ದಾವೆಗಳಿದ್ದರೆ ಸದಸ್ಯರು ಹಾಗೂ ಸಾರ್ವಜನಿಕರು ಏಳು ದಿನಗಳೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಸಹಕಾರ ಇಲಾಖೆ ಸೂಚಿಸಿದೆ.

ಸಮಾಪನೆ ಪ್ರಕ್ರಿಯೆಗೆ ಒಳಪಟ್ಟಿರುವ ಸಂಘಗಳಲ್ಲಿ ಬೆಳವಣಕಿಯ ಶ್ರೀ ಬಸವೇಶ್ವರ ಕೋ-ಆಪ್ ಕ್ರೆಡಿಟ್ ಸೊಸೈಟಿ, ಯಾವಗಲದ ಡಾ. ಅಂಬೇಡ್ಕರ್ ಏತ ನೀರಾವರಿ ಸಹಕಾರ ಸಂಘ, ಹಿರೇಮಣ್ಣೂರ ವೀವರ್ಸ್ ಆ್ಯಂಡ್ ಪ್ರೊಡ್ಯೂಸ್ ಕೋ-ಆಪ್ ಸೊಸೈಟಿ, ಹೊನ್ನಿಗನೂರ ಹಾಗೂ ಭೋಪಳಾಪುರದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳು, ರೋಣದ ಕಲ್ಪವೃಕ್ಷ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ, ರೋಣ ತಾಲೂಕ ಆರ್ಟಿಜನ್ ಮಲ್ಟಿಪರ್ಪಸ್ ಕೋ-ಆಪ್ ಸೊಸೈಟಿ, ರೋಣ ತಾಲೂಕ ಮಟ್ಟದ ಸ್ವಯಂಸೇವಾ ಗ್ರಾಮೀಣ ವಿವಿಧೋದ್ದೇಶಗಳ ಕೈಗಾರಿಕಾ ಸಹಕಾರ ಸಂಘ, ಕುರಹಟ್ಟಿಯ ಮಾರುತೇಶ್ವರ ಪತ್ತಿನ ಸಹಕಾರ ಸಂಘ, ಡಿ.ಎಸ್. ಹಡಗಲಿ ನಂ.2 ಹಾಗೂ ಸವಡಿ ನಂ.2ರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಗಜೇಂದ್ರಗಡದ ವಿದ್ಯಾವರ್ಧಕ ವಸಾಹತುಗಾರರ ಕನ್‌ಸ್ಯೂಮರ್ಸ್ ಕೋ-ಆಪ್ ಸೊಸೈಟಿ, ವೆಂಕಟೇಶ್ವರ ಕನ್ ಸ್ಯೂಮರ್ಸ್ ಕೋ-ಆಪ್ ಸೊಸೈಟಿ, ನೇತ್ರಾವತಿ ಪತ್ತಿನ ಮಹಿಳಾ ಸಹಕಾರ ಸಂಘ, ವರ್ಧಮಾನ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ ಹಾಗೂ ಸಿದ್ದಗಿರಿಜಾ ಮಹಿಳಾ ಕೋ-ಆಪ್ ಕ್ರೆಡಿಟ್ ಸೊಸೈಟಿ ಸೇರಿವೆ.

ಸಂಘಗಳು ತಮ್ಮ ನೋಂದಾಯಿತ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ ಹಾಗೂ ಆಡಳಿತ ಮಂಡಳಿ ಮತ್ತು ಮುಖ್ಯ ಕಾರ್ಯನಿರ್ವಾಹಕರ ಮಾಹಿತಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ, ಸಂಘಗಳಿಗೆ ಸಂಬಂಧಿಸಿದ ದಾಖಲೆಗಳಿದ್ದರೆ ಏಳು ದಿನಗಳೊಳಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಹಿರಿಯ ನಿರೀಕ್ಷಕರನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಸಂಘಗಳ ಅಸ್ತಿತ್ವವನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣಿ ರದ್ದುಪಡಿಸುವ ಕ್ರಮ ಕೈಗೊಳ್ಳಲಾಗುವುದು. ನಂತರ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ಆಲೂರು ವೆಂಕಟರಾವ್ ಜನ್ಮದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಅವರ 145ನೇ ಜನ್ಮದಿನಾಚರಣೆಯನ್ನು ಜುಲೈ 12ರಂದು ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಚರಿಸಲಾಗುತ್ತದೆ. ಹಿರಿಯ ಸಾಹಿತಿ ಡಾ. ಸಿದ್ಧಲಿಂಗ ಪಟ್ಟಣಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಪುಸ್ತಕ ಬಿಡುಗಡೆ ಮಾಡಲಿದ್ದು, ಶಿವಪುತ್ರಪ್ಪ ಅರ್. ಆಶಿ ಅವರು ಕರ್ನಾಟಕ ಏಕೀಕರಣದ ಇತಿಹಾಸ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಟ್ರಸ್ಟ್ ಮನವಿ ಮಾಡಿದೆ.

## ಗದಗದಲ್ಲಿ ದಿಗಂಬರ ಜೈನ ಸಂಘದ ಧಾರ್ಮಿಕ ಕಾರ್ಯಕ್ರಮ

# ಆತ್ಮಶುದ್ಧಿಗೆ ಶಾಂತಿನಾಥ ವಿಧಾನದ ಮಹತ್ವ



**ವಿಜಯಸಾಕ್ಷಿ ಸುದ್ದಿ, ಗದಗ**

ಜೈನ ಧರ್ಮದ ವಿಧಿವಿಧಾನಗಳು ಆತ್ಮದ ಶುದ್ಧೀಕರಣ ಹಾಗೂ ಕರ್ಮಗಳ ವಿನಾಶಕ್ಕೆ ಮಹತ್ವದ ಸಾಧನಗಳಾಗಿದ್ದು, ಶ್ರೀ ಶಾಂತಿನಾಥ ವಿಧಾನಟಿ ಅತ್ಯಂತ ಪವಿತ್ರ ಮತ್ತು ಪ್ರಭಾವಶಾಲಿ ಪೂಜಾ ಆಚರಣೆಯಾಗಿದೆ ಎಂದು ಚರ್ಯಾಶಿರೋಮಣಿ ಪರಮಪೂಜ್ಯ ಮುನಿಶ್ರೀ ವಿದಿತಸಾಗರ ಮಹಾರಾಜರು ಹೇಳಿದರು.

ನಗರದ ಹುಡ್ಕೋ ಕಾಲೋನಿಯ ಸಚ್ಚಿದಾನಂದ ಮಠದ ಭವನದಲ್ಲಿ ಗದಗ ಜಿಲ್ಲಾ ದಿಗಂಬರ ಜೈನ ಸಂಘ ಆಯೋಜಿಸಿದ್ದ ಶ್ರೀ ಶಾಂತಿನಾಥ ವಿಧಾನಟಿ ಕಾರ್ಯಕ್ರಮದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಜೈನ ಪರಂಪರೆಯ 16ನೇ ತೀರ್ಥಂಕರರಾದ ಶಾಂತಿನಾಥರನ್ನು ಶಾಂತಿಯ ಅಧಿದೇವತೆಟಿಯಾಗಿ ಆರಾಧಿಸಲಾಗುತ್ತದೆ. ಈ ವಿಧಾನ ಆಚರಿಸುವುದರಿಂದ ಮನಸ್ಸಿನಲ್ಲಿರುವ ಒತ್ತಡ, ಕೋಪ, ಕ್ರೌರ್ಯ ದೂರವಾಗಿ ಅಹಿಂಸೆ ಮತ್ತು ವಿಶ್ವಶಾಂತಿಯ ಸಂದೇಶ ಬಲಗೊಳ್ಳುತ್ತದೆ ಎಂದು ತಿಳಿಸಿದರು.

ವ್ಯಾಪಾರ, ಉದ್ಯೋಗ, ಶಿಕ್ಷಣ, ಕುಟುಂಬ ಜೀವನದಲ್ಲಿನ ವಿಘ್ನಗಳು ಹಾಗೂ ಪ್ರಾಕೃತಿಕ ವಿಕೋಪಗಳಿಂದ ರಕ್ಷಣೆಗಾಗಿ ಈ ವಿಧಾನವನ್ನು ಭಕ್ತಿಭಾವದಿಂದ ಆಚರಿಸಲಾಗುತ್ತದೆ. ಜಲ, ಚಂದನ, ಅಕ್ಷತೆ, ಪುಷ್ಪ, ದೀಪ, ಧೂಪ, ಫಲ ಹಾಗೂ ಅರ್ಘ್ಯ ಎಂಬ ಅಷ್ಟದ್ರವ್ಯಗಳಿಂದ ತೀರ್ಥಂಕರರಿಗೆ ವಿಶೇಷ ಪೂಜೆ ಸಲ್ಲಿಸುವ ಸಂಪ್ರದಾಯವಿದೆ ಎಂದು ವಿವರಿಸಿದರು.

ಸಂಘದ ಗೌರವಾಧ್ಯಕ್ಷ ಡಾ. ಅಪ್ಪಣ್ಣ ಹಂಜೆ ಮಾತನಾಡಿ, ಗದಗ ಪ್ರದೇಶದಲ್ಲಿ 7ನೇ ಶತಮಾನದಿಂದಲೇ ಜೈನ ಮುನಿಗಳು ಹಾಗೂ ಆರ್ಯಿಕೆಯರು ಧರ್ಮಪ್ರಭಾವನೆ ನಡೆಸುತ್ತ ಬಂದಿದ್ದು, ಆ ಪರಂಪರೆಯನ್ನು ಮುನಿಶ್ರೀ ವಿದಿತಸಾಗರ ಮಹಾರಾಜರು ಮುಂದುವರಿಸುತ್ತಿರುವುದು ಜಿಲ್ಲೆಯ ಜೈನ ಸಮಾಜದ ಸೌಭಾಗ್ಯ ಎಂದರು.

ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ ಮಾತನಾಡಿ, ಗದಗ ನಗರದಲ್ಲಿ ಬಸದಿ ಹಾಗೂ ಸಭಾಭವನ ನಿರ್ಮಾಣಕ್ಕೆ ಭೂಮಿ ಮಂಜೂರು ಮಾಡುವ ಭರವಸೆಯನ್ನು ಸಚಿವ ಎಚ್.ಕೆ. ಪಾಟೀಲ ನೀಡಿದ್ದಾರೆ. ಸರ್ಕಾರ ಹಾಗೂ ಜನಪ್ರತಿನಿಧಿಗಳ ಸಹಕಾರದಿಂದ ಶೀಘ್ರದಲ್ಲೇ ಬಸದಿ ನಿರ್ಮಿಸಿ ಜೈನ ಧಾರ್ಮಿಕ ಮತ್ತು ಲೋಕಕಲ್ಯಾಣ ಚಟುವಟಿಕೆಗಳನ್ನು ವಿಸ್ತರಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಕಾಶ ಮುತ್ತಿನ, ಸಂಕಪ್ಪ ನಾವಳ್ಳಿ, ಎಂ.ಟಿ. ಕಬ್ಬಿಣ, ಸಂಜೀವಕುಮಾರ್ ಪಾಂಡ್ರೆ, ಎ.ಎನ್. ಬಸ್ತಿ, ನಾಗರಾಜ ತುಕೋಳ, ಯಶವಂತ ಸಿದ್ದಣ್ಣವರ, ಸುಭಾಷ್ ಅಂಗಡಿ, ಅನಂತರಾಜ ಬಸ್ತಿ, ರವಿ ಮುತ್ತಿನ, ಎ.ವೈ. ಇಂಚಲ, ಹನಮಂತಗೌಡ ಮತಗಟ್ಟಿ, ಬಿ.ಎಸ್. ನಾವಳ್ಳಿ, ಪರಿಮಳಾ ಕುಲಕರ್ಣಿ, ಸಹನಾ ಹಂಜೆ, ಸುಮನ ಮುತ್ತಿನ, ಶೋಭಕ್ಕ ಇಂಚಲ, ವಸಂತಮಾಲಾ ದೇಸಾಯಿ, ಅನಂತಮತಿ ಬಸ್ತಿ, ಸುಪ್ರಿಯಾ ನಾವಳ್ಳಿ, ಮಧುಮತಿ ಕಬ್ಬಿಣ ಸೇರಿದಂತೆ ಜಿಲ್ಲೆಯ ಶ್ರಾವಕ-ಶ್ರಾವಿಕೆಯರು ಅಷ್ಟದ್ರವ್ಯಗಳಿಂದ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಪ್ರಕಾಶ ಮುತ್ತಿನ ವಂದಿಸಿದರು. ಶಾಂತಿನಾಥ ತೀರ್ಥಂಕರರಿಗೆ ಮಹಾಮಂಗಳಾರತಿ ನೆರವೇರಿಸುವ ಮೂಲಕ ಧಾರ್ಮಿಕ ಕಾರ್ಯಕ್ರಮ ಸಂಪನ್ನವಾಯಿತು.

## ನಾಗಾ- ವಿಕಳಸಾಪೂರ ಬಳಿಯ ಗುಡ್ಡಗಳಲ್ಲಿ ಲೂಟಿ ಆರೋಪ | ತಹಸೀಲ್ದಾರ್‌ಗೆ ಕರವೇ ಮನವಿ

# ಅಕ್ರಮ ಗರಸು ದಂಧೆಗೆ ಕಡಿವಾಣ ಹಾಕಿ!




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ನಾಗಾವಿ ಹಾಗೂ ಕಳಸಾಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಡ್ಡಗಳಲ್ಲಿ ಅಕ್ರಮವಾಗಿ ಗರಸು ಮತ್ತು ಮ್ಯಾಗ್ನಿಸ್ (ಅದಿರು) ಗಣಿಗಾರಿಕೆ ನಡೆಯುತ್ತಿದ್ದು, ತಕ್ಷಣವೇ ದಂಧೆ ನಿಲ್ಲಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹಿಸಿದೆ.

ಈ ಕುರಿತು ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಕರವೇ ಗದಗ ಜಿಲ್ಲಾಧ್ಯಕ್ಷ ಹನುಮಂತಪ್ಪ ಅಬ್ಬಿಗೇರಿ, ರಾತ್ರಿ-ಹಗಲು ಎನ್ನದೆ ಯಾವುದೇ ಅಧಿಕಾರಿಗಳ ಭಯವಿಲ್ಲದೆ ಅಕ್ರಮ ಗಣಿಗಾರಿಕೆ ಹಾಗೂ ಸಾಗಣೆ ನಡೆಯುತ್ತಿದೆ. ಇದರಿಂದ ಕೆಲ ಅಧಿಕಾರಿಗಳ ಪಾತ್ರದ ಬಗ್ಗೆ ಅನುಮಾನ ಮೂಡುತ್ತಿದೆ ಎಂದು ಆರೋಪಿಸಿದರು.

ಗುಡ್ಡ ಹಾಗೂ ಗೋಮಾಳ ಜಾಗಗಳಲ್ಲಿ ಭಾರಿ ಗಾತ್ರದ ಗುಂಡಿಗಳನ್ನು ತೋಡಿ ಗರಸು ಮತ್ತು ಮ್ಯಾಗ್ನಿಸ್ ಸಾಗಿಸಲಾಗುತ್ತಿದೆ. ಈ ಗುಂಡಿಗಳಲ್ಲಿ ರೈತರು ಹಾಗೂ ಜಾನುವಾರುಗಳು ಬಿದ್ದು ಪ್ರಾಣ ಕಳೆದುಕೊಳ್ಳುವಂತಹ ಅಪಾಯ ಎದುರಾಗಿದೆ. ಆದ್ದರಿಂದ ಕೂಡಲೇ ಗುಂಡಿಗಳನ್ನು ಮುಚ್ಚಿ, ತಂತಿ ಬೇಲಿ ಅಳವಡಿಸಿ ಸಾರ್ವಜನಿಕರು ಹಾಗೂ ಜಾನುವಾರುಗಳ ಸುರಕ್ಷತೆ ಖಚಿತಪಡಿಸಬೇಕು ಎಂದು ಒತ್ತಾಯಿಸಿದರು.

ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಗರಸು ಮತ್ತು ಮ್ಯಾಗ್ನಿಸ್ ಸಾಗಣೆಯನ್ನು ತಕ್ಷಣವೇ ತಡೆದು ಕಾನೂನು ಕ್ರಮ ಕೈಗೊಳ್ಳಬೇಕು. ಮನವಿಗೆ ಸ್ಪಂದಿಸದಿದ್ದರೆ ಗದಗ ತಹಸೀಲ್ದಾರ್ ಕಚೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಮಾರುತಿ ಈಳಗೇರ, ಹನುಮಂತ ಪೂಜಾರ, ತೌಶೀಫ್ ಡಾಲಾಯತ್, ಬಸವರಾಜ ಮೇಟಿ, ಲಕ್ಷ್ಮೀ ಹಿತ್ತಲಮನಿ, ಹುಸೇನಸಾಬ ಕುಂಡಾಲಿ, ದಾವಲಸಾಬ ತಹಶೀಲ್ದಾರ, ರವಿ ಮಲ್ಲಾಡದ, ಮುಸ್ತಾಪ ದಾವಣಗೇರಿ, ಹುಸೇನ ಅಕ್ಕಿ, ರೂಪಾ ಅಬ್ಬಿಗೇರಿ, ಖಾಸಿಮಸಾಬ್ ವಾಲಿಕಾರ, ಇಸಾರಅಹಮ್ಮದ್ ನದಾಫ್, ಸಿರಾಜ್ ಹೊಸಮನಿ, ಕುಮಾರ ರೇವಣ್ಣನವರ, ಪ್ರಕಾಶ ನಂದಿಕೋಡೆ, ಯೂಸೂಫ್ ಗದಗ, ಪ್ರಶಾಂತ್ ನವಲಗುಂದ ಹಾಗೂ ಶಂಭು ಹಿರೇಮಠ ಉಪಸ್ಥಿತರಿದ್ದರು.

# ಕೃಷಿ ಅಧಿಕಾರಿಗಳಿಂದ ಬೆಳೆಗಳ ಪರಿಶೀಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಗದಗ ತಾಲೂಕಿನ ತಿಮ್ಮಾಪುರ ಹಾಗೂ ಹರ್ಲಾಪೂರ ಭಾಗದಲ್ಲಿ ಬೆಳೆಗಳು ಒಣಗುತ್ತಿದ್ದು, ಕೃಷಿ ಇಲಾಖೆಯ ಅಧಿಕಾರಿಗಳು ಗುರುವಾರ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿದರು.

ಗದಗ-ಬೆಟಗೇರಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜೇಶ್ವರಿ ಸಜ್ಜನರ ಅವರು ಮಳೆ ಕೊರತೆಯಿಂದ ಒಣಗುತ್ತಿರುವ ಹಾಗೂ ರೋಗಬಾಧೆಗೆ ತುತ್ತಾಗಿರುವ ಹೆಸರು, ಸೂರ್ಯಕಾಂತಿ ಹಾಗೂ ಗೋವಿನಜೋಳ ಬೆಳೆಗಳನ್ನು ವೀಕ್ಷಿಸಿ ರೈತರಿಗೆ ಅಗತ್ಯ ಸಲಹೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಗದಗ ಜಿಲ್ಲೆಯಲ್ಲಿ ತೀವ್ರ ಬರಗಾಲದಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಈ ಮುಂಗಾರು ಹಂಗಾಮಿನಲ್ಲೂ ಮಳೆ ಕೊರತೆ ಎದುರಾಗುವ ಸಾಧ್ಯತೆಯಿದೆ. ಆದ್ದರಿಂದ ರೈತರು ಒಣಭೂಮಿಯಲ್ಲಿ ಈರುಳ್ಳಿ ಹಾಗೂ ಮೆಣಸಿನಕಾಯಿ ಬಿತ್ತನೆ ಮಾಡದಂತೆ ಎಚ್ಚರಿಕೆ ನೀಡಿದರು. ಅಲ್ಲದೆ, ಕೃಷಿ ಇಲಾಖೆ ಬಿಡುಗಡೆ ಮಾಡಿರುವ ಬೆಳೆ ಸಮೀಕ್ಷೆ ಆ್ಯಪ್ ಮೂಲಕ ರೈತರು ತಮ್ಮ ಜಮೀನಿನ ಬೆಳೆಗಳನ್ನು ಜಿಪಿಎಸ್ ಮೂಲಕ ನೋಂದಾಯಿಸಿಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ಮಳೆ ಕೊರತೆಯಿಂದ ಬೆಳೆಗಳು ಸಂಪೂರ್ಣ ಒಣಗುತ್ತಿದ್ದು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ತಕ್ಷಣ ಬೆಳೆ ಸಮೀಕ್ಷೆ ನಡೆಸಿ ಸೂಕ್ತ ಬೆಳೆ ಪರಿಹಾರ ನೀಡಬೇಕು ಹಾಗೂ ಗದಗ ಜಿಲ್ಲೆಯನ್ನು ಮುಂಗಾರು ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಪರಿಶೀಲನೆ ವೇಳೆ ರೈತರಾದ ಮಲ್ಲಿಕಾರ್ಜುನ ಇದ್ಲಿ, ರಾಮಣ್ಣ ತಳವಾರ, ಉದಯ ಗಂಗರಾತ್ರಿ, ನಾಗಲಿಂಗಪ್ಪ ಕಮ್ಮಾರ, ಮುತ್ತಪ್ಪ ಗಾಣದ, ಹನುಮಪ್ಪ ಗುಡ್ಡಾನೂರ, ಮಲ್ಲಪ್ಪ ಹಂಚಿನಾಳ, ವೆಂಕಟೇಶ ಪೂಜಾರ, ಕುಮಾರ್ ಜೋಗಿನ, ವಿಜಯಲಕ್ಷ್ಮೀ ಕೊಮಲಾಪೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಾಲ್ಕು ವಿಧಗಳಲ್ಲಿ ತ್ಯಾಜ್ಯ ವಿಂಗಡಿಸಿ ಪರಿಸರ ಕಾಪಾಡಿ: ಪೂರ್ಣಿಮಾ ಹೊಸಮನಿ

# ಕಸ ವಿಂಗಡಣೆಗೆ ಮಕ್ಕಳಿಂದಲೇ ಜಾಗೃತಿ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮನೆಯ ಕಸವನ್ನು ಒಟ್ಟಾಗಿ ವಿಲೇವಾರಿ ಮಾಡುವ ಬದಲು ಹಸಿ, ಒಣ, ವಿಷತ್ಯಾಜ್ಯ ಹಾಗೂ ವಿಶೇಷ ತ್ಯಾಜ್ಯ ಎಂದು ಪ್ರತ್ಯೇಕವಾಗಿ ವಿಂಗಡಿಸಿ ನೀಡುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಈ ಕುರಿತು ವಿದ್ಯಾರ್ಥಿಗಳು ತಮ್ಮ ಮನೆಗಳಲ್ಲಿ ಪಾಲಕರಿಗೆ ಜಾಗೃತಿ ಮೂಡಿಸಬೇಕು ಎಂದು ಕಮ್ಯೂನಿಟಿ ಮೊಬಿಲೈಜರ್ ಪೂರ್ಣಿಮಾ ಹೊಸಮನಿ ಹೇಳಿದರು.

ಪಟ್ಟಣದ ಡಾ. ಕೆ.ಬಿ. ಧನ್ನೂರ ಪಿಎಸ್ ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪಟ್ಟಣ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಕಸ ವಿಂಗಡಣೆ ಜಾಗೃತಿ ಅಭಿಯಾನದಲ್ಲಿ ಅವರು ಮಾತನಾಡಿದರು.

ಫೆಬ್ರವರಿ 1, 2026ರಿಂದ ಘನತ್ಯಾಜ್ಯ ನಿರ್ವಹಣೆಯ ನಿಯಮಗಳಲ್ಲಿ ಮಹತ್ವದ ಬದಲಾವಣೆ ಜಾರಿಯಾಗಿದ್ದು, ಪ್ರತಿಯೊಬ್ಬರೂ ಅದನ್ನು ಪಾಲಿಸಬೇಕಾಗಿದೆ. ಹವಾಮಾನ ಬದಲಾವಣೆ ಸಚಿವಾಲಯದ ಹೊಸ ನಿಯಮಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದು ತಿಳಿಸಿದರು.

ರೇಣುಕಾ ಕಳಕಣ್ಣವರ ಮಾತನಾಡಿ, ಈ ಹಿಂದೆ ಹಸಿ ಮತ್ತು ಒಣ ಕಸ ಎಂದು ಎರಡು ವಿಭಾಗಗಳಲ್ಲಿ ಮಾತ್ರ ವಿಂಗಡಿಸಲಾಗುತ್ತಿತ್ತು. ಆದರೆ ಈಗ ಹಸಿ ಕಸ, ಒಣ ಕಸ, ವಿಷತ್ಯಾಜ್ಯ ಕಸ ಹಾಗೂ ವಿಶೇಷ ತ್ಯಾಜ್ಯ ಕಸ ಎಂದು ನಾಲ್ಕು ವಿಭಾಗಗಳಲ್ಲಿ ವಿಂಗಡಿಸಿ ಮನೆಯ ಬಾಗಿಲಿಗೆ ಬರುವ ಕಸದ ವಾಹನಕ್ಕೆ ನೀಡಬೇಕು. ಇದರಿಂದ ತ್ಯಾಜ್ಯ ನಿರ್ವಹಣೆ ಸುಲಭವಾಗುವುದರ ಜೊತೆಗೆ ಪರಿಸರವೂ ಸ್ವಚ್ಛವಾಗಿರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯ ಶಿಕ್ಷಕ ಮಂಜುನಾಥ ಗ್ರಾಮಪುರೋಹಿತ, ವಿದ್ಯಾರ್ಥಿಗಳು ಈ ಮಾಹಿತಿಯನ್ನು ತಮ್ಮ ಮನೆ ಹಾಗೂ ನೆರೆಹೊರೆಯವರಿಗೆ ತಲುಪಿಸಿ ಸ್ವಚ್ಛತಾ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಪ್ರಾಥಮಿಕ ವಿಭಾಗದ ಮುಖ್ಯಶಿಕ್ಷಕ ಸುರೇಶ ಮಲ್ಲನಗೌಡ್ರ, ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಗದಗ-ಬೆಟಗೇರಿ ಲಯನ್ಸ್ ಕ್ಲಬ್ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಗವಿಸಿದ್ದಪ್ಪ ಮುದ್ಗಲ್

# ಸೇವೆಯೇ ಲಯನ್ಸ್ ಕ್ಲಬ್‌ನ ನಿಜವಾದ ಗುರುತು




**ವಿಜಯಸಾಕ್ಷಿ ಸುದ್ದಿ, ಗದಗ**

ಲಯನ್ಸ್ ಕ್ಲಬ್‌ನ ನೂತನ ಪದಾಧಿಕಾರಿಗಳು ಸ್ನೇಹ, ಸೇವೆ ಮತ್ತು ಸಮರ್ಪಣೆಯ ಮನೋಭಾವದಿಂದ ಸಮಾಜಮುಖಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಲಯನ್ಸ್ ಜಿಲ್ಲೆ317ರ ದ್ವಿತೀಯ ಉಪ ಜಿಲ್ಲಾ ಗವರ್ನರ್ ಗವಿಸಿದ್ದಪ್ಪ ಮುದ್ಗಲ್ ಹೇಳಿದರು.

ನಗರದ ಲಯನ್ಸ್ ಶಾಲೆಯ ಸಭಾಂಗಣದಲ್ಲಿ ಗುರುವಾರ ನಡೆದ ಗದಗಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಲೇಡೀಸ್ ವಿಂಗ್‌ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಪದಗ್ರಹಣ ನೆರವೇರಿಸಿ ಮಾತನಾಡಿದ ಅವರು, ಜನರಿಗೆ ನೇರವಾಗಿ ಉಪಯುಕ್ತವಾಗುವ ಸೇವಾ ಯೋಜನೆಗಳನ್ನು ರೂಪಿಸಿ ಎಲ್ಲ ಸದಸ್ಯರ ಸಹಕಾರದಿಂದ ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಮೂಲಕ ಲಯನ್ಸ್ ಕ್ಲಬ್‌ನ ಸೇವಾ ಪರಂಪರೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಲಯನ್ಸ್ ಕ್ಲಬ್ ಜಾತಿ, ಧರ್ಮ ಹಾಗೂ ರಾಜಕೀಯ ಭೇದವಿಲ್ಲದೆ ಸಮಾಜಸೇವೆಯನ್ನು ಧ್ಯೇಯವಾಗಿಟ್ಟುಕೊಂಡಿರುವ ಅಂತರರಾಷ್ಟ್ರೀಯ ಸಂಸ್ಥೆಯಾಗಿದ್ದು, ನಾಯಕತ್ವ ಹಾಗೂ ಸಾಮಾಜಿಕ ಬದ್ಧತೆಯನ್ನು ಬೆಳೆಸುವ ಉತ್ತಮ ವೇದಿಕೆಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರವೀಣ ವಾರಕರ ಅಧ್ಯಕ್ಷರಾಗಿ, ಡಾ. ನವೀನ ಹಿರೇಗೌಡರ ಹಾಗೂ ರಾಜಣ್ಣ ಮಲ್ಲಾಡದ ಉಪಾಧ್ಯಕ್ಷರಾಗಿ, ಲಿಂಗರಾಜ ತೋಟದ ಕಾರ್ಯದರ್ಶಿಯಾಗಿ, ರೇಣುಕಪ್ರಸಾದ ಹಿರೇಮಠ ಸಹ ಕಾರ್ಯದರ್ಶಿಯಾಗಿ ಹಾಗೂ ರೇಣುಕಪ್ರಸಾದ ಶಿಗ್ಲಿಮಠ ಖಜಾಂಚಿಯಾಗಿ ಅಧಿಕಾರ ಸ್ವೀಕರಿಸಿದರು.

ಲೇಡೀಸ್ ವಿಂಗ್‌ನ ಅಧ್ಯಕ್ಷೆಯಾಗಿ ಅಮೃತಾ ವಾರಕರ, ಕಾರ್ಯದರ್ಶಿಯಾಗಿ ಅರ್ಣಾ ತೋಟದ ಹಾಗೂ ಖಜಾಂಚಿಯಾಗಿ ಪ್ರಿಯಾ ಶಿಗ್ಲಿಮಠ ಪದಗ್ರಹಣ ಮಾಡಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ನಿಕಟಪೂರ್ವ ಜಿಲ್ಲಾ ಗವರ್ನರ್ ಆನಂದ ಪೋತ್ನೀಸ್, ಕಳೆದ ಸಾಲಿನ ತಂಡ ಕ್ಲಬ್‌ಗೆ ಆರು ಪ್ರಶಸ್ತಿಗಳನ್ನು ತಂದು ಗೌರವ ಹೆಚ್ಚಿಸಿದ್ದು, ಅದೇ ಉತ್ಸಾಹ ಮತ್ತು ಬದ್ಧತೆಯಿಂದ ನೂತನ ತಂಡವೂ ಕಾರ್ಯನಿರ್ವಹಿಸಬೇಕು ಎಂದು ಹಾರೈಸಿದರು.

ನೂತನ ಅಧ್ಯಕ್ಷ ಪ್ರವೀಣ ವಾರಕರ ಹಾಗೂ ಲೇಡೀಸ್ ವಿಂಗ್ ಅಧ್ಯಕ್ಷೆ ಅಮೃತಾ ವಾರಕರ ತಮ್ಮ ಅಧಿಕಾರಾವಧಿಯ ಸಮಾಜಮುಖಿ ಸೇವಾ ಯೋಜನೆಗಳನ್ನು ವಿವರಿಸಿ ಸದಸ್ಯರ ಸಹಕಾರ ಕೋರಿದರು.

ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿದ್ಯಾರ್ಥಿಗಳಿಗೆ ನೋಟ್‌ಬುಕ್‌ಗಳ ವಿತರಣೆ ಹಾಗೂ ಹಿರಿಯ ನಾಗರಿಕರಿಗೆ ವಾಕರ್‌ಗಳನ್ನು ವಿತರಿಸಲಾಯಿತು.

ನಿಕಟಪೂರ್ವ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಕಳೆದ ಸಾಲಿನ ಕಾರ್ಯಚಟುವಟಿಕೆಗಳ ವರದಿಯನ್ನು ಪವರ್‌ಪಾಯಿಂಟ್ ಮೂಲಕ ಮಂಡಿಸಿದರು. ರಾಜಣ್ಣ ವೇರ್ಣೇಕರ ಸ್ವಾಗತಿಸಿದರು. ಪ್ರಭು ನೀಲಗುಂದ ಕಾರ್ಯಕ್ರಮ ಪರಿಚಯಿಸಿದರು. ಜೆ.ಡಿ. ಉತ್ತರಕರ ನಿರೂಪಿಸಿ, ಲಿಂಗರಾಜ ತೋಟದ ವಂದಿಸಿದರು. ಸಮಾರಂಭದಲ್ಲಿ ಕ್ಲಬ್‌ನ ಹಿರಿಯ ಹಾಗೂ ಕಿರಿಯ ಸದಸ್ಯರು, ಗಣ್ಯರು ಉಪಸ್ಥಿತರಿದ್ದರು.

## 18 ಸಹಕಾರ ಸಂಘಗಳ ಸಮಾಪನೆ ಪ್ರಕ್ರಿಯೆ: ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ನರಗುಂದ ತಾಲೂಕಿನ 18 ಸಹಕಾರ ಸಂಘಗಳನ್ನು ಸಮಾಪನೆಗೊಳಿಸುವ ಪ್ರಕ್ರಿಯೆಯನ್ನು ಸಹಕಾರ ಇಲಾಖೆ ಆರಂಭಿಸಿದ್ದು, ಸಂಘಗಳ ಸದಸ್ಯರು ಅಥವಾ ಸಾರ್ವಜನಿಕರಿಗೆ ಯಾವುದೇ ಬಾಕಿ ವ್ಯವಹಾರಗಳಿದ್ದರೆ ಏಳು ದಿನಗಳೊಳಗೆ ಸೂಕ್ತ ದಾಖಲಾತಿಗಳೊಂದಿಗೆ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಲಾಗಿದೆ. ಮಾನ್ಯ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ಬೆಳಗಾವಿ ಪ್ರಾಂತ ಹಾಗೂ ಉಪನಿಬಂಧಕರ ಆದೇಶದಂತೆ, ನರಗುಂದ ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಕಾಶ ಹೆಚ್. ನವಲಗುಂದ ಅವರನ್ನು ಸಮಾಪನಾಧಿಕಾರಿಯಾಗಿ ನೇಮಿಸಲಾಗಿದೆ. ನಿಗದಿತ ಅವಧಿಯಲ್ಲಿ ಆಕ್ಷೇಪಣೆ ಸಲ್ಲಿಸದಿದ್ದರೆ, ಸಂಘಗಳ ಅಸ್ತಿತ್ವವನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣೆ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಮಾಪನೆ ಪ್ರಕ್ರಿಯೆಗೆ ಒಳಪಟ್ಟಿರುವ ಸಂಘಗಳಲ್ಲಿ ನರಗುಂದ ತಾಲೂಕ ಮೆಕ್ಯಾನಿಕಲ್ ಲ್ಯಾಂಡ್ ಡೆವಲಪ್‌ಮೆಂಟ್ (ಸಹಕಾರಿ ಯಾಂತ್ರಿಕ ಭೂ ಅಭಿವೃದ್ಧಿ) ಕೋ-ಆಪ್ ಸೊಸೈಟಿ, ನರಗುಂದ ತಾಲೂಕ ಆರ್ಟಿಜನ್ ಮಲ್ಟಿಪರ್ಪಸ್ ಕೋ-ಆಪ್ ಸೊಸೈಟಿ, ಶಿರೋಳದ ಪ್ರಿಯದರ್ಶಿನಿ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ, ನರಗುಂದದ ಶ್ರೀ ಲಕ್ಷ್ಮೀ ಮಹಿಳಾ ಅರ್ಬನ್ ಪತ್ತಿನ ಸಹಕಾರ ಸಂಘ, ನರಗುಂದ ವಡ್ಡರ ಸಮಾಜದ ಮನೆ ಕಟ್ಟುವವರ ಸಹಕಾರ ಸಂಘ, ಬನಹಟ್ಟಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ, ಚಿಕ್ಕನರಗುಂದ ಹಾಲು ಉತ್ಪಾದಕರ ಸಹಕಾರ ಸಂಘ, ಶಿರೋಳದ ಲಕ್ಷ್ಮೀ ಕೋ-ಆಪ್ ಕ್ರೆಡಿಟ್ ಸೊಸೈಟಿ, ಕೊಣ್ಣೂರ-ಶಿರೋಳ ಅನುದಾನಿತ ಪ್ರೌಢಶಾಲಾ ಶಿಕ್ಷಕರ ನೌಕರರ ಪತ್ತಿನ ಸಹಕಾರ ಸಂಘ, ಶ್ರೀ ಬಾಬಾಸಾಹೇಬ ಕೋ-ಆಪ್ ಕ್ರೆಡಿಟ್ ಸೊಸೈಟಿ, ಶ್ರೀ ಜಗದ್ಗುರು ಮೌನೇಶ್ವರ ಕೋ-ಆಪ್ ಕ್ರೆಡಿಟ್ ಸೊಸೈಟಿ, ಶಿರೋಳ ಕೋ-ಆಪ್ ಕ್ರೆಡಿಟ್ ಸೊಸೈಟಿ, ಚಿಕ್ಕನರಗುಂದದ ಶ್ರೀ ಬಸವೇಶ್ವರ ವಿವಿಧೋದ್ದೇಶಗಳ ಸಹಕಾರ ಸಂಘ, ಕಪ್ಪಲಿ ಹಾಲು ಉತ್ಪಾದಕರ ಸಹಕಾರ ಸಂಘ, ಸ್ವಸ್ತಿಕ ಕೋ-ಆಪ್ ಕ್ರೆಡಿಟ್ ಸೊಸೈಟಿ, ಶಿರೋಳ ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘ, ಶ್ರೀ ಮಹಾಲಕ್ಷ್ಮೀ ಕೋ-ಆಪ್ ಕ್ರೆಡಿಟ್ ಸೊಸೈಟಿ ಹಾಗೂ ನರಗುಂದ ತಾಲೂಕ ಶ್ರೀ ಕನಕದಾಸ ಕುರಿ ಸಾಕಾಣಿಕೆ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ ಸೇರಿವೆ. ಸಂಘಗಳಿಗೆ ಸಂಬಂಧಿಸಿದ ಯಾವುದೇ ಹಣಕಾಸು ವ್ಯವಹಾರ, ಬಾಕಿ ಅಥವಾ ಹಕ್ಕು-ದಾವೆಗಳಿದ್ದಲ್ಲಿ ಸದಸ್ಯರು ಹಾಗೂ ಸಾರ್ವಜನಿಕರು ದಾಖಲೆಗಳೊಂದಿಗೆ ನರಗುಂದ ಸಹಕಾರ ಅಭಿವೃದ್ಧಿ ಅಧಿಕಾರಿಯನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮುಂಗಾರು ಬೆಳೆ ವಿಮೆಗೆ ನೋಂದಣಿ ಆರಂಭ; ಇತರೆ ಬೆಳೆಗಳಿಗೆ ಜು. 31 ಹಾಗೂ ಆ. 14ರವರೆಗೆ ಅವಕಾಶ

# ಜು. 15ರೊಳಗೆ ಹೆಸರು, ಹತ್ತಿ ಬೆಳೆ ವಿಮೆ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

202627ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಅಡಿ ಅಧಿಸೂಚಿತ ಬೆಳೆಗಳಿಗೆ ವಿಮೆ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದ್ದು, ರೈತರು ಕೊನೆಯ ದಿನದವರೆಗೆ ಕಾಯದೆ ಕೂಡಲೇ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಹೆಸರು (ಮಳೆಯಾಶ್ರಿತ) ಹಾಗೂ ಹತ್ತಿ (ಮಳೆಯಾಶ್ರಿತ ಮತ್ತು ನೀರಾವರಿ) ಬೆಳೆಗಳಿಗೆ ವಿಮೆ ನೋಂದಣಿ ಮಾಡಿಸಲು ಜುಲೈ 15 ಕೊನೆಯ ದಿನವಾಗಿದೆ. ಗೋವಿನಜೋಳ, ಸಜ್ಜೆ, ತೊಗರಿ, ಶೇಂಗಾ ಹಾಗೂ ಭತ್ತ ಬೆಳೆಗಳಿಗೆ ಜುಲೈ 31, ಸೂರ್ಯಕಾಂತಿ ಬೆಳೆಗೆ ಆಗಸ್ಟ್ 14ರವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ಬೆಳೆ ಸಾಲ ಪಡೆದ ರೈತರಿಗೆ ಯೋಜನೆ ಕಡ್ಡಾಯವಾಗಿದ್ದು, ಯೋಜನೆಯಿಂದ ಹೊರಗುಳಿಯಲು ಬಯಸುವವರು ವಿಮೆ ನೋಂದಣಿಯ ಅಂತಿಮ ದಿನಾಂಕಕ್ಕೆ ಏಳು ದಿನಗಳ ಮೊದಲು ಸಂಬಂಧಿಸಿದ ಬ್ಯಾಂಕ್ ವ್ಯವಸ್ಥಾಪಕರಿಗೆ ಲಿಖಿತ ಮನವಿ ಸಲ್ಲಿಸಬೇಕು. ಬೆಳೆ ಸಾಲ ಪಡೆಯದ ರೈತರಿಗೆ ಯೋಜನೆ ಐಚ್ಛಿಕವಾಗಿದೆ.

ವಿಮೆ ನೋಂದಣಿಗೆ ಫ್ರುಟ್ಸ್ (ಊಖಿಐಖಿ) ಐಡಿ ಕಡ್ಡಾಯವಾಗಿದೆ. ರೈತರು ಪಹಣಿ, ಖಾತೆ ಪುಸ್ತಕ ಅಥವಾ ಕಂದಾಯ ರಶೀದಿಯೊಂದಿಗೆ ಬ್ಯಾಂಕ್, ಗ್ರಾಮ ಒನ್ ಹಾಗೂ ಸಾರ್ವಜನಿಕ ಸೇವಾ ಕೇಂದ್ರಗಳ ಮೂಲಕ ಟಿಸಂರಕ್ಷಣೆಟಿ ಪೋರ್ಟಲ್ನಲ್ಲಿ ಅರ್ಜಿ ಸಲ್ಲಿಸಬಹುದು.

ಯೋಜನೆಯಡಿ ಆಲಿಕಲ್ಲು ಮಳೆ, ಭೂಕುಸಿತ, ಮೇಘಸ್ಫೋಟ, ಗುಡುಗು-ಮಿಂಚು, ಬೆಂಕಿ ಅವಘಡ, ಬೆಳೆ ಮುಳುಗಡೆ ಸೇರಿದಂತೆ ಸ್ಥಳೀಯ ಪ್ರಕೃತಿ ವಿಕೋಪಗಳಿಂದ ಉಂಟಾಗುವ ಬೆಳೆ ಹಾನಿಗೂ ಪರಿಹಾರ ಪಡೆಯಲು ಅವಕಾಶವಿದೆ. ಇಂತಹ ಸಂದರ್ಭದಲ್ಲಿ ರೈತರು 72 ಗಂಟೆಗಳೊಳಗೆ ಸಂಬಂಧಿಸಿದ ವಿಮಾ ಸಂಸ್ಥೆಗೆ ಲಿಖಿತವಾಗಿ ಅಥವಾ ಸಹಾಯವಾಣಿ ಮೂಲಕ ಮಾಹಿತಿ ನೀಡಬೇಕು.

ಪ್ರಸಕ್ತ ಸಾಲಿನಲ್ಲಿ ಇಂಡಸ್‌ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ ಅನುಷ್ಠಾನ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ, ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ವಿಮಾ ಸಂಸ್ಥೆಯ ಗದಗ ಶಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ರೋಣ-ಗಜೇಂದ್ರಗಡದಲ್ಲಿ ವಿಬಿ-ಜಿ ರಾಮ್ (ಜಿ) ಯೋಜನೆಗೆ ಸಜ್ಜು; ದಿನಕ್ಕೆ ₹382 ಕೂಲಿ, ವರ್ಷಕ್ಕೆ 125 ದಿನ ಉದ್ಯೋಗ

# ಗ್ರಾಮದಲ್ಲೇ ಉದ್ಯೋಗಕ್ಕೆ ಗ್ಯಾರಂಟಿ

**ವಿಜಯಸಾಕ್ಷಿ ಸುದ್ದಿ, ರೋಣ**

ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ಮಂದಗತಿಯಲ್ಲಿ ಸಾಗುತ್ತಿರುವ ನಡುವೆಯೇ ಗ್ರಾಮೀಣ ಕೂಲಿಕಾರರಿಗೆ ಆಸರೆಯಾಗುವ ವಿಬಿ-ಜಿ ರಾಮ್ (ಜಿ) ಯೋಜನೆ ಅನುಷ್ಠಾನಕ್ಕೆ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿ ಸಿದ್ಧತೆಗಳು ವೇಗ ಪಡೆದಿವೆ. ಗ್ರಾಮೀಣ ಕುಟುಂಬಗಳಿಗೆ ತಮ್ಮ ಗ್ರಾಮದಲ್ಲೇ ಉದ್ಯೋಗ ಒದಗಿಸುವ ಉದ್ದೇಶದಿಂದ ಜಾರಿಗೆ ತರಲಾಗಿರುವ ಈ ಯೋಜನೆಯಡಿ ದಿನಕ್ಕೆ ₹382 ಕೂಲಿ ಹಾಗೂ ವರ್ಷಕ್ಕೆ 125 ದಿನಗಳ ಕೌಶಲರಹಿತ ಉದ್ಯೋಗ ಖಾತರಿ ನೀಡಲಾಗುತ್ತಿದೆ.

ಈ ವರ್ಷ ನಿರೀಕ್ಷಿತ ಪ್ರಮಾಣದಲ್ಲಿ ಮುಂಗಾರು ಮಳೆ ಸುರಿಯದ ಕಾರಣ ಹಲವು ಗ್ರಾಮಗಳಲ್ಲಿ ಕೃಷಿ ಕೆಲಸಗಳು ಇನ್ನೂ ಪೂರ್ಣ ಪ್ರಮಾಣದಲ್ಲಿ ಆರಂಭವಾಗಿಲ್ಲ. ಇಂತಹ ಸಂದರ್ಭದಲ್ಲಿ ಗ್ರಾಮೀಣ ಕೂಲಿಕಾರರಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ದೊರೆಯುವ ನಿರೀಕ್ಷೆ ಮೂಡಿದ್ದು, ಯೋಜನೆ ಕುಟುಂಬಗಳ ಆದಾಯಕ್ಕೆ ಆಸರೆಯಾಗಲಿದೆ.

ಯೋಜನೆಯ ಮೊದಲ ಹಂತದಲ್ಲಿ ಈಗಾಗಲೇ ಇ-ಕೆವೈಸಿ ಪೂರ್ಣಗೊಳಿಸಿರುವ ಹಳೆಯ ನರೇಗಾ ಜಾಬ್ ಕಾರ್ಡ್‌ಗಳನ್ನೇ ಮಾನ್ಯಗೊಳಿಸಿ ಉದ್ಯೋಗ ನೀಡಲಾಗುತ್ತದೆ. ನಂತರ ಹಂತ ಹಂತವಾಗಿ ಅರ್ಹ ಕುಟುಂಬಗಳಿಗೆ ಹೊಸ ಗ್ರಾಮೀಣ ರೋಜ್‌ಗಾರ್ ಗ್ಯಾರಂಟಿ ಕಾರ್ಡ್ ವಿತರಿಸಲಾಗುತ್ತದೆ. ಈವರೆಗೆ ಯಾವುದೇ ಯೋಜನೆಯಲ್ಲಿ ನೋಂದಣಿಯಾಗದ ಕುಟುಂಬಗಳಿಗೂ ಹೊಸದಾಗಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಯೋಜನೆ ಜಾರಿಗೆ ಅಗತ್ಯ ಪೂರ್ವಸಿದ್ಧತೆ ಪೂರ್ಣಗೊಂಡಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ಗ್ರಾಮಸಭೆಗಳ ಮೂಲಕ ಕಾಮಗಾರಿಗಳ ಕ್ರಿಯಾ ಯೋಜನೆ ರೂಪಿಸುವ ಕಾರ್ಯ ನಡೆಯುತ್ತಿದೆ. ಜಲ ಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ, ಜೀವನೋಪಾಯ ವೃದ್ಧಿ ಹಾಗೂ ಹವಾಮಾನ ಬದಲಾವಣೆಗೆ ಹೊಂದಿಕೊಳ್ಳುವ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ. ಯೋಜನೆಯಲ್ಲಿ ಪಾರದರ್ಶಕತೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಕೆಲಸದ ಸ್ಥಳಗಳಲ್ಲಿ ಫೇಸ್ ಅಥೆಂಟಿಕೇಶನ್ ಮೂಲಕ ಹಾಜರಾತಿ, ಕಾರ್ಮಿಕರಿಗೆ ಸುರಕ್ಷಿತ ಕುಡಿಯುವ ನೀರು, ನೆರಳು, ವಿಶ್ರಾಂತಿ ಸೌಲಭ್ಯ ಹಾಗೂ ಪ್ರಥಮ ಚಿಕಿತ್ಸಾ ಪೆಟ್ಟಿಗೆ ಒದಗಿಸುವ ವ್ಯವಸ್ಥೆ ಕಡ್ಡಾಯಗೊಳಿಸಲಾಗಿದೆ.

ಕೃಷಿ ಹಂಗಾಮಿನಲ್ಲಿ ರೈತರಿಗೆ ಕಾರ್ಮಿಕರ ಕೊರತೆ ಉಂಟಾಗದಂತೆ ಬಿತ್ತನೆ ಹಾಗೂ ಕೊಯ್ಲಿನ ಅವಧಿಯಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದೆ, ಉಳಿದ ಅವಧಿಯಲ್ಲಿ ಹೆಚ್ಚಿನ ಕಾಮಗಾರಿಗಳನ್ನು ಆರಂಭಿಸಿ ಗ್ರಾಮೀಣ ಕುಟುಂಬಗಳಿಗೆ ನಿರಂತರ ಉದ್ಯೋಗ ಕಲ್ಪಿಸುವ ಗುರಿ ಹೊಂದಲಾಗಿದೆ.



**ವಿಬಿ-ಜಿ ರಾಮ್ (ಜಿ) ಯೋಜನೆ ಅನುಷ್ಠಾನಕ್ಕೆ ತಾಲೂಕು ಮಟ್ಟದಲ್ಲಿ ಅಗತ್ಯ ಎಲ್ಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಗ್ರಾಮ ಪಂಚಾಯಿತಿಗಳಿಗೆ ತರಬೇತಿ ಹಾಗೂ ಮಾರ್ಗದರ್ಶನ ನೀಡಲಾಗಿದ್ದು, ಅರ್ಹ ಗ್ರಾಮೀಣ ಕುಟುಂಬಗಳಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಕಲ್ಪಿಸಲು ಕ್ರಮವಹಿಸಲಾಗಿದೆ. ಎಲ್ಲ ಅರ್ಹ ಕಾರ್ಮಿಕರು ಯೋಜನೆಯ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು.**

**- ಚಂದ್ರಶೇಖರ ಬಿ. ಕಂದಕೂರ,**
ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ ರೋಣ ಹಾಗೂ ಗಜೇಂದ್ರಗಡ




### ಧರ್ಮ, ಸದಾಚಾರ ಮತ್ತು ಸದ್ಗುಣಗಳಿಂದಲೇ ಬದುಕು ಸಾರ್ಥಕವಾಗುತ್ತದೆ: ರಂಭಾಪುರಿ ಶ್ರೀಗಳು

# ಮೌಲ್ಯಾಧಾರಿತ ಬದುಕೇ ಜೀವನಕ್ಕೆ ನಿಜವಾದ ಬೆಲೆ

**ವಿಜಯಸಾಕ್ಷಿ ಸುದ್ದಿ, ತರೀಕೆರೆ**

ಶಾಂತಿ, ಸಮೃದ್ಧಿ ಮತ್ತು ಸಂತೃಪ್ತಿಯ ಬದುಕಿಗೆ ಧರ್ಮಾಚರಣೆ ಅತ್ಯಗತ್ಯ. ಮೌಲ್ಯಾಧಾರಿತ ಜೀವನವನ್ನು ಅಳವಡಿಸಿಕೊಂಡಾಗ ಮಾತ್ರ ಬದುಕಿಗೆ ನಿಜವಾದ ಬೆಲೆ ಬರುತ್ತದೆ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಮುಂಡ್ರೆ ಗ್ರಾಮದಲ್ಲಿ ಶುಕ್ರವಾರ ನಡೆದ ಶ್ರದ್ಧಾಂಜಲಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮನುಷ್ಯನ ಬದುಕು ಸಮಾಜಕ್ಕೆ ಮಾದರಿಯಾಗಬೇಕೇ ಹೊರತು ಮಾರಕವಾಗಬಾರದು ಎಂದು ತಿಳಿಸಿದರು.

ಬಾಲ್ಯದಲ್ಲಿ ಜ್ಞಾನ, ಯೌವನದಲ್ಲಿ ಸಂಪತ್ತು ಮತ್ತು ವೃದ್ಧಾಪ್ಯದಲ್ಲಿ ಪುಣ್ಯ ಸಂಪಾದಿಸಿಕೊಳ್ಳುವುದು ಜೀವನದ ಗುರಿಯಾಗಬೇಕು.

ಸಂಪತ್ತಿಗಿಂತ ಸದ್ಗುಣಗಳಿಗೆ ಹೆಚ್ಚಿನ ಮಹತ್ವವಿದ್ದು, ಅಸತ್ಯದಿಂದ ಸತ್ಯದೆಡೆಗೆ, ಕತ್ತಲೆಯಿಂದ ಬೆಳಕಿನೆಡೆಗೆ ಮತ್ತು ಮರಣದಿಂದ ಅಮರತ್ವದ ಅರಿವಿನೆಡೆಗೆ ಸಾಗುವುದೇ ಮಾನವ ಜೀವನದ ಧ್ಯೇಯ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರ ಸಂದೇಶವನ್ನು ಸ್ಮರಿಸಿದರು.

ಮಹಿಳೆಯರು ಭಾರತೀಯ ಸಂಸ್ಕೃತಿಯ ಜೀವಾಳವಾಗಿದ್ದು, ಶೀಲ ಮತ್ತು ಚಾರಿತ್ರ್ಯ ಕುಟುಂಬದ ಘನತೆಯನ್ನು ಹೆಚ್ಚಿಸುತ್ತದೆ. ಸುಸಂಸ್ಕೃತ ಮಹಿಳೆ ಇಡೀ ಕುಟುಂಬವನ್ನು ಬೆಳಗಬಲ್ಲಳು ಎಂದು ಹೇಳಿದ ಅವರು, ದಿವಂಗತ ಶ್ರೀಮತಿ ಬಿ.ಎಂ. ರತ್ನಮ್ಮ ಅವರ ಆದರ್ಶ ಗೃಹಸ್ಥ ಜೀವನವನ್ನು ಸ್ಮರಿಸಿ ಗೌರವ ನಮನ ಸಲ್ಲಿಸಿದರು.

ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಅಧ್ಯಕ್ಷ ಹೆಚ್.ಎಂ. ಲೋಕೇಶ್ ಕಾರ್ಯಕ್ರಮ ಉದ್ಘಾಟಿಸಿದರು.



**ಸಂಪತ್ತು ಗಳಿಸದಿದ್ದರೂ ಪರವಾಗಿಲ್ಲ; ಸದ್ಗುಣವಂತನಾಗಿ ಬದುಕುವುದು ಜೀವನದ ದೊಡ್ಡ ಸಾಧನೆ.**

**- ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು**

ವಿವಿಧ ಮಠಗಳ ಪೂಜ್ಯರು ಶ್ರದ್ಧಾಂಜಲಿ ಸಲ್ಲಿಸಿದರು. ಶಾಸಕರಾದ ಸಿ.ಟಿ. ರವಿ, ಜಿ.ಎಚ್. ಶ್ರೀನಿವಾಸ, ವನಮಾಲಾ ಮೃತ್ಯುಂಜಯ, ಸವಿತಾ ರಮೇಶ್, ಮಾಜಿ ಶಾಸಕ ಶಿವಶಂಕರಪ್ಪ ಸೇರಿದಂತೆ ಹಲವು ಗಣ್ಯರು, ಭಕ್ತರು ಮತ್ತು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಸಮಾರಂಭದ ಬಳಿಕ ಗಣಾರಾಧನೆ ನಡೆಯಿತು.

# ಕ್ರೀಡಾಪಟುಗಳ ಮಾಹಿತಿ ಸಲ್ಲಿಕೆಗೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ವಿವಿಧ ಕ್ರೀಡೆಗಳಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳ ಅಧಿಕೃತ ಮಾಹಿತಿ ಸಂಗ್ರಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮುಂದಾಗಿದೆ.

ಜಿಲ್ಲೆಯ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ನಿಗದಿತ ಅರ್ಜಿ ನಮೂನೆ ಪಡೆದು, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಸಾಧನೆಗೆ ಸಂಬಂಧಿಸಿದ ಪ್ರಶಸ್ತಿ ಪತ್ರಗಳ ಪ್ರತಿಗಳೊಂದಿಗೆ ಜುಲೈ 20ರೊಳಗೆ ಸಲ್ಲಿಸುವಂತೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯನ್ನು ಸಂಪರ್ಕಿಸಬಹುದು. ಹಾಗೆಯೇ ಹಾಕಿ ತರಬೇತುದಾರ ಮಂಜುನಾಥ್ ಬಾಗಡೆ (ಮೊ. 9036533909) ಹಾಗೂ ಸೈಕ್ಲಿಂಗ್ ತರಬೇತುದಾರೆ ಶ್ರೀಮತಿ ವಿದ್ಯಾ ಕುಲಕರ್ಣಿ (ಮೊ. 8951936636) ಅವರನ್ನು ಸಂಪರ್ಕಿಸಬಹುದಾಗಿದೆ.

### ವಿಜಯಪುರ ಜಿಲ್ಲೆಯಿಂದ ಚಾಮರಾಜನಗರ ಕಾರಾಗೃಹಕ್ಕೆ ಸ್ಥಳಾಂತರ

# ರೌಡಿಶೀಟರ್ ತುಳಸಿರಾಮ ಗಡಿಪಾರು

**ವಿಜಯಸಾಕ್ಷಿ ಸುದ್ದಿ, ವಿಜಯಪುರ**



ಭೀಮಾತೀರದ ರೌಡಿಶೀಟರ್ ತುಳಸಿರಾಮನನ್ನು ಗೂಂಡಾ ಕಾಯ್ದೆಯಡಿ ವಿಜಯಪುರ ಜಿಲ್ಲೆಯಿಂದ ಗಡಿಪಾರು ಮಾಡಿ ಚಾಮರಾಜನಗರ ಜಿಲ್ಲಾ ಕಾರಾಗೃಹದಲ್ಲಿ ಬಂಧನದಲ್ಲಿಡುವಂತೆ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಆದೇಶಿಸಿದ್ದಾರೆ.

ಇಂಡಿ ತಾಲೂಕಿನ ಅರ್ಜನಾಳ ಗ್ರಾಮದ ನಿವಾಸಿಯಾಗಿರುವ ತುಳಸಿರಾಮನ ವಿರುದ್ಧ ಅಕ್ರಮ ಸಾರಾಯಿ, ಮಾದಕ ವಸ್ತು, ಜೂಜು ಸೇರಿದಂತೆ ಹಲವು ಅಪರಾಧ ಪ್ರಕರಣಗಳು ದಾಖಲಾಗಿವೆ. ತುಳಸಿ ನಗರದ ರವಿ ಮೇಲಿನಕೇರಿ ಹಾಗೂ ಸುಶೀಲ್ ಕಾಳೆ ಹತ್ಯೆ ಪ್ರಕರಣದಲ್ಲಿ ಕೂಡ ಆತ ಪ್ರಮುಖ ಆರೋಪಿಯಾಗಿದ್ದಾನೆ. ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವ ಚಟುವಟಿಕೆಗಳಲ್ಲಿ ತೊಡಗಿದ್ದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

# ಯುವನಿಧಿ ಯೋಜನೆ ಸದುಪಯೋಗಪಡಿಸಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ ಯೋಜನೆ ಕುರಿತು ಜಾಗೃತಿ ಹಾಗೂ ವೃತ್ತಿಮಾರ್ಗದರ್ಶನ ಕಾರ್ಯಕ್ರಮವನ್ನು ನಗರದ ಶ್ರೀ ತೋಂಟದಾರ್ಯ ಸಿದ್ದಲಿಂಗೇಶ್ವರ ಕಲ್ಯಾಣ ಕೇಂದ್ರ, ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆಯ ಅರ್ಹತೆ, ನೋಂದಣಿ ವಿಧಾನ ಹಾಗೂ ಯೋಜನೆಯ ಸೌಲಭ್ಯಗಳ ಕುರಿತು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಧಿಕಾರಿಗಳು ಮಾಹಿತಿ ನೀಡಿದರು.

ವಿದ್ಯಾರ್ಥಿಗಳು ಯೋಜನೆಯ ಸದುಪಯೋಗ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವಂತೆ ಸಲಹೆ ನೀಡಲಾಯಿತು.



ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಪ್ರಾಚಾರ್ಯ ಜಗದೀಶ ಶಿವನಗುತ್ತಿ, ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ್ ಪಿ.ಎನ್., ಸಹಾಯಕ ಉದ್ಯೋಗಾಧಿಕಾರಿ ಎಚ್ಚರಪ್ಪ ಬಡಿಗೇರ ಹಾಗೂ ಆಪ್ತ ಸಮಾಲೋಚಕ ಆನಂದ ಹೊಂಬಳ ಉಪಸ್ಥಿತರಿದ್ದರು.

ಯುವನಿಧಿ ಯೋಜನೆಯಡಿ ಪದವೀಧರರಿಗೆ ತಿಂಗಳಿಗೆ ₹3,000 ಹಾಗೂ ಡಿಪ್ಲೊಮಾ ಪಡೆದವರಿಗೆ ₹1,500 ನಿರುದ್ಯೋಗ ಭತ್ಯೆ ನೀಡಲಾಗುತ್ತದೆ. 2023ರ ನಂತರ ಪದವಿ ಅಥವಾ ಡಿಪ್ಲೊಮಾ ಪೂರ್ಣಗೊಳಿಸಿ ಕನಿಷ್ಠ ಆರು ತಿಂಗಳು ನಿರುದ್ಯೋಗಿಯಾಗಿರುವವರು ಅರ್ಹರಾಗಿದ್ದು, ಗರಿಷ್ಠ ಎರಡು ವರ್ಷಗಳವರೆಗೆ ಭತ್ಯೆ ಪಡೆಯಬಹುದು. ಆಸಕ್ತರು ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

# ಬೆಳೆ ವಿಮೆಗೆ ನೋಂದಣಿ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

202627ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ ಅಡಿ ಮುಂಡರಗಿ ತಾಲೂಕಿನ ರೈತರು ವಿವಿಧ ಅಧಿಸೂಚಿತ ಬೆಳೆಗಳಿಗೆ ನೋಂದಣಿ ಮಾಡಿಸಿಕೊಳ್ಳುವಂತೆ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಳೆಯಾಶ್ರಿತ ಮೆಕ್ಕೆಜೋಳ ಹಾಗೂ ಮಳೆಯಾಶ್ರಿತ ಸೂರ್ಯಕಾಂತಿ, ಹೋಬಳಿ ಮಟ್ಟದಲ್ಲಿ ನೀರಾವರಿ ಭತ್ತ, ಗೋವಿನಜೋಳ, ಶೇಂಗಾ, ಹತ್ತಿ, ತೊಗರಿ, ಸಜ್ಜೆ, ಹೆಸರು ಹಾಗೂ ನೀರಾವರಿ ಸೂರ್ಯಕಾಂತಿ ಸೇರಿದಂತೆ ವಿವಿಧ ಬೆಳೆಗಳಿಗೆ ವಿಮೆ ಸೌಲಭ್ಯ ಕಲ್ಪಿಸಲಾಗಿದೆ.

ಬೆಳೆ ವಿಮೆ ನೋಂದಣಿಗೆ ಫ್ರುಟ್ಸ್ (ಊಐಈ) ಐಡಿ ಕಡ್ಡಾಯವಾಗಿದ್ದು, ರೈತರು ಪಹಣಿ, ಆಧಾರ್, ಬ್ಯಾಂಕ್ ಖಾತೆ ವಿವರ ಹಾಗೂ ಬೆಳೆ ದೃಢೀಕರಣ ದಾಖಲೆಗಳೊಂದಿಗೆ ಬ್ಯಾಂಕ್, ಸಹಕಾರಿ ಸಂಘ, ಸಿಎಸ್‌ಸಿ ಅಥವಾ ಗ್ರಾಮ್ ಒನ್ ಕೇಂದ್ರಗಳಲ್ಲಿ ವಿಮಾ ಕಂತು ಪಾವತಿಸಿ ನೋಂದಣಿ ಮಾಡಿಸಿಕೊಳ್ಳಬಹುದು.

ಹೆಸರು ಹಾಗೂ ಹತ್ತಿ ಬೆಳೆಗಳಿಗೆ ಜುಲೈ 15, ಗೋವಿನಜೋಳ, ಸಜ್ಜೆ, ತೊಗರಿ, ಶೇಂಗಾ, ಭತ್ತ, ನೀರಾವರಿ ಮೆಣಸಿನಕಾಯಿ ಹಾಗೂ ಈರುಳ್ಳಿಗೆ ಜುಲೈ 31, ಸೂರ್ಯಕಾಂತಿ, ಮಳೆಯಾಶ್ರಿತ ಮೆಣಸಿನಕಾಯಿ ಹಾಗೂ ಈರುಳ್ಳಿಗೆ ಆಗಸ್ಟ್ 14 ಕೊನೆಯ ದಿನವಾಗಿದೆ.

ಕೇಂದ್ರ ಸರ್ಕಾರದ ಹೊಸ ಮಾರ್ಗಸೂಚಿಯಂತೆ, ಸಾಲ ಪಡೆಯದ ರೈತರು ಬೆಳೆ ವಿಮೆಗೆ ನೋಂದಾಯಿಸುವ ಸಂದರ್ಭದಲ್ಲಿ ಯಾವುದೇ ಬ್ಯಾಂಕ್ ಅಥವಾ ಕೆಸಿಸಿ ಕೃಷಿ ಸಾಲ ಪಡೆದಿಲ್ಲ ಎಂಬ ಸ್ವಯಂ ಘೋಷಣಾ ಪತ್ರ ಸಲ್ಲಿಸುವುದು ಕಡ್ಡಾಯವಾಗಿದೆ. ಈ ನಮೂನೆಗಳು ಸಿಎಸ್‌ಸಿ ಹಾಗೂ ಗ್ರಾಮ್ ಒನ್ ಕೇಂದ್ರಗಳಲ್ಲಿ ಲಭ್ಯವಿರುತ್ತವೆ ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಇಂಡಸ್‌ಇಂಡ್ ಜನರಲ್ ಇನ್ಶೂರೆನ್ಸ್ ಕಂಪನಿ ಜಿಲ್ಲಾ ವ್ಯವಸ್ಥಾಪಕ ನಿಂಗಯ್ಯ (ಮೊ. 9008258062), ಜಿಲ್ಲಾ ಸಮನ್ವಯ ಅಧಿಕಾರಿ ಸಿದ್ದನಗೌಡ ಪಾಟೀಲ (ಮೊ. 9742099809) ಹಾಗೂ ಮುಂಡರಗಿ ತಾಲೂಕು ಪ್ರತಿನಿಧಿ ಎಂ.ಡಿ. ಇಬ್ರಾಹಿಂ (ಮೊ. 8880441188) ಅವರನ್ನು ಸಂಪರ್ಕಿಸಬಹುದು ಎಂದು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಶಿವಯೋಗಿ ಶ್ರೀಗಳ ದರ್ಶನ ಪಡೆದ ವಿವೇಕ್ ಯಾವಗಲ್

**ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಕಲ್ಯಾಣ ಹಾಗೂ ವಿಶ್ವಶಾಂತಿಯ ಸಂಕಲ್ಪದೊಂದಿಗೆ 33 ದಿನಗಳ ಕಠಿಣ ಶಿವಯೋಗ ಸಿದ್ಧಿ ಸಮಾಧಿ ಅನುಷ್ಠಾನ ಯಶಸ್ವಿಯಾಗಿ ಪೂರ್ಣಗೊಳಿಸಿದ ಗದಗ ತಾಲೂಕಿನ ಅಂತೂರುಬೆಂತೂರು ಗ್ರಾಮದ ಪೂಜ್ಯ ಡಾ. ರಾಚೋಟೇಶ್ವರ ಸ್ವಾಮೀಜಿ ಅವರನ್ನು ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಹಾಗೂ ನರಗುಂದ ಕ್ಷೇತ್ರದ ಯುವ ನಾಯಕ ವಿವೇಕ್ ಯಾವಗಲ್ ಭೇಟಿ ಮಾಡಿ ಆಶೀರ್ವಾದ ಪಡೆದರು.



ಈ ವೇಳೆ ಸ್ವಾಮೀಜಿಗಳ ಆರೋಗ್ಯ ವಿಚಾರಿಸಿದ ಅವರು, ಲೋಕಕಲ್ಯಾಣಕ್ಕಾಗಿ ಕೈಗೊಂಡ ಅಪರೂಪದ ಶಿವಯೋಗ ಅನುಷ್ಠಾನವನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಈಶಣ್ಣ ಹುಣಸಿಕಟ್ಟಿ, ಮೂಗನೂರು ಡಾರ್ಕ್ಟ, ಶರಣಪ್ಪ ಗವಾರಿ, ನಿಂಗಪ್ಪ ಗುಂಜಳ, ಪ್ರವೀಣಗೌಡ ಪಾಟೀಲ, ರಾಜಾಹುಲಿ ಪೂಜಾರ, ಮಂಜುನಾಥ್ ಜಡಿ, ರಫೀಕ್, ಮೇಘರಾಜ್, ಸುರೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎರಡು ಸಹಕಾರ ಸಂಘಗಳ ಸಮಾಪನೆ ಪ್ರಕ್ರಿಯೆ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಹಾಗೂ ರೋಣ ತಾಲೂಕಿನಲ್ಲಿ ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ಗದಗದ ದೈವಜ್ಞ ಕ್ರಿಯಾ ಸಮಿತಿ ವಿವಿಧೋದ್ದೇಶಗಳ ಸಹಕಾರ ಸಂಘ ಹಾಗೂ ಅಬ್ಬಿಗೇರಿಯ ಶ್ರೀ ಬಸವೇಶ್ವರ ವಿವಿಧೋದ್ದೇಶಗಳ ಸಹಕಾರ ಸಂಘಗಳನ್ನು ಸಮಾಪನೆಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದೆ.

ಸಹಕಾರ ಸಂಘಗಳ ಉಪನಿಬಂಧಕರ ಆದೇಶದಂತೆ ಸಮಾಪನಾಧಿಕಾರಿಯನ್ನು ನೇಮಿಸಲಾಗಿದ್ದು, ಸಂಘಗಳು ತಮ್ಮ ನೋಂದಾಯಿತ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ ಆಡಳಿತ ಮಂಡಳಿ ಹಾಗೂ ಮುಖ್ಯ ಕಾರ್ಯನಿರ್ವಾಹಕರ ಮಾಹಿತಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ, ಈ ಸಂಘಗಳಿಗೆ ಸಂಬಂಧಿಸಿದ ಯಾವುದೇ ಹಣಕಾಸಿನ ವ್ಯವಹಾರ, ಬಾಕಿ ಅಥವಾ ಹಕ್ಕು-ದಾವೆಗಳಿದ್ದರೆ.

ಸಾರ್ವಜನಿಕರು ಹಾಗೂ ಸದಸ್ಯರು ಸೂಕ್ತ ದಾಖಲೆಗಳೊಂದಿಗೆ ಏಳು ದಿನಗಳೊಳಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಹಿರಿಯ ನಿರೀಕ್ಷಕರನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ನಿಗದಿತ ಅವಧಿಯಲ್ಲಿ ಆಕ್ಷೇಪಣೆ ಸಲ್ಲಿಸದಿದ್ದರೆ, ಈ ಎರಡೂ ಸಂಘಗಳ ನೋಂದಣಿಯನ್ನು ನಿಯಮಾನುಸಾರ ರದ್ದುಪಡಿಸುವ ಕ್ರಮ ಕೈಗೊಳ್ಳಲಾಗುವುದು. ನಂತರ ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಅಕ್ಕಮಹಾದೇವಿ ಗುಗ್ಗರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಇಂದಿನಿಂದ ರಾಮಾಯಣ ಪ್ರವಚ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ವಿಶ್ವಮಧ್ವ ಮಹಾಪರಿಷತ್ ಶಾಖೆ ವತಿಯಿಂದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಜುಲೈ 9ರಿಂದ 13ರವರೆಗೆ ಪ್ರತಿದಿನ ಸಂಜೆ 6.30ರಿಂದ 8 ಗಂಟೆಯವರೆಗೆ ಸಮಗ್ರ ರಾಮಾಯಣ ಪ್ರವಚನ ಏರ್ಪಡಿಸಲಾಗಿದೆ.

ಪ್ರವಚನವನ್ನು ಪಂ. ಆನಂದಾಚಾರ್ಯ ಜೋಶಿ ಅವರು ನಡೆಸಿಕೊಡಲಿದ್ದು, ಮೊದಲ ದಿನ ಬಾಲಕಾಂಡದ (ಸರ್ಗ 1ರಿಂದ 37) ಕುರಿತು ಉಪನ್ಯಾಸ ನೀಡಲಿದ್ದಾರೆ.

ಇದೇ ಸಂದರ್ಭದಲ್ಲಿ ಭಾವಬೋಧಕಾರರಾದ ಶ್ರೀ ರಘೋತ್ತಮತೀರ್ಥ ಶ್ರೀಚರಣರ ಪಾದುಕಾ ರಥ ಆಗಮಿಸಲಿದ್ದು, ಏಕಾದಶಿ ದಿನವನ್ನು ಹೊರತುಪಡಿಸಿ ಪ್ರತಿದಿನ ಬೆಳಿಗ್ಗೆ ಪಾದುಕಾ ಪೂಜೆ ನಡೆಯಲಿದೆ.

ಸದ್ಭಕ್ತರು ಪಾದುಕಾ ರಥವನ್ನು ತಮ್ಮ ಮನೆಗೆ ಬರಮಾಡಿಕೊಂಡು ಪೂಜೆ ಸಲ್ಲಿಸಿ ಶ್ರೀಗಳ ಅನುಗ್ರಹ ಪಡೆಯುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ. ಕಾರ್ಯಕ್ರಮದ ಕುರಿತು ಹೆಚ್ಚಿನ ಮಾಹಿತಿಗಾಗಿ ಮೊ. 9449902001, 8618171225 ಹಾಗೂ 9449399888 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿಗೆ ಡಾ. ಬಾಲಾಜಿ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕನ್ನಡ ಜಾನಪದ ಪರಿಷತ್ತಿನ ಸಂಸ್ಥಾಪಕ ಹಾಗೂ ರಾಜ್ಯಾಧ್ಯಕ್ಷ ಡಾ. ಜಾನಪದ ಎಸ್. ಬಾಲಾಜಿ ಅವರು ಪ್ರತಿಷ್ಠಿತ ನಾಡೋಜ ಡಾ. ಕಯ್ಯಾರ ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ2026ಗೆ ಆಯ್ಕೆಯಾಗಿದ್ದಾರೆ.

ಕನ್ನಡ ನಾಡು-ನುಡಿ, ಜಾನಪದ ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿ ಕ್ಷೇತ್ರದಲ್ಲಿ ಕಳೆದ 32 ವರ್ಷಗಳಿಂದ ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ಕೇರಳದ ಕಾಸರಗೋಡಿನ ಕನ್ನಡ ಭವನ ಈ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಜುಲೈ 26ರಂದು ಕಾಸರಗೋಡಿನ ಕನ್ನಡ ಭವನದಲ್ಲಿ ನಡೆಯುವ ರಜತ ಸಂಭ್ರಮ ಸಮಾರೋಪ ಹಾಗೂ ಕರ್ನಾಟಕ ಗಡಿನಾಡು ಕನ್ನಡ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಮ್ಮೇಳನ ಸಮಿತಿ ಅಧ್ಯಕ್ಷ ಡಾ. ಕೆ.ಎನ್. ವೆಂಕಟ್ರಮಣ ಹೊಳ್ಳ ಹಾಗೂ ಕನ್ನಡ ಭವನದ ಸ್ಥಾಪಕ ಅಧ್ಯಕ್ಷ ಡಾ. ಕೆ. ವಾಮನ್ ರಾವ್ ಬೇಕಲ್ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕನ್ನಡ ಜಾನಪದ ಪರಿಷತ್ತು ತಾಲೂಕು ಘಟಕದ ಅಧ್ಯಕ್ಷ ಅಂಬಳಿ ಕೇಶವಮೂರ್ತಿ, ಕಿಂಡ್ರಿ ಲಕ್ಷ್ಮಿಪತಿ, ಸುಡುಗಾಡು ಸಿದ್ದ, ನಾಗರಾಜ್ ಗಂಟಿ, ಗುಡ್ಡಪ್ಪ, ಎಸ್. ನಿಂಗನಗೌಡ, ಮಾಂತೇಶ್, ಜಿ. ಶ್ರೀನಿವಾಸ್, ಕೆ.ಎಸ್. ಹುಲುಗಪ್ಪ, ಎಸ್. ಚಂದ್ರು, ಉಪ್ಪಾರ್ ಕನಕಪ್ಪ, ಜಿ. ಪಕೀರಪ್ಪ, ಸುಡುಗಾಡು ಹಾಗೂ ಗೊರವರ ಜಾನಪದ ಕಲಾತಂಡಗಳು, ಜನನಿ ಸೇವಾ ಟ್ರಸ್ಟ್ ಪದಾಧಿಕಾರಿಗಳು ಸೇರಿದಂತೆ ಹಲವರು ಅಭಿನಂದನೆ ಸಲ್ಲಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka